ಸಂಪುಟ: 06 ಸಂಚಿಕೆ: 99 ಪುಟಗಳು: 08 ಸೋಮವಾರ 22 ಜೂನ್ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಒಬ್ಬರ ನಡತೆ ನಮಗೆ ಹಿಡಿಸುತ್ತಿಲ್ಲವೆಂದಾಗ ಅಂಥದೊಂದು ಸ್ವಭಾವ ನಮ್ಮಲ್ಲೂ ಇದೆಯೇ ಎಂದು ನೋಡಿಕೊಂಡು ಸರಿಪಡಿಸಿಕೊಳ್ಳಬೇಕು!

## ಜಗವ ಗೆದ್ದ ಯೋಗ

ಅಂತಾರಾಷ್ಟ್ರೀಯ ಯೋಗ ದಿನಾಚರಣೆ

12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ವಿಶ್ವದ ಜನಸಮುದಾಯಕ್ಕೆ ನೀಡಿದ ಕರೆಯಾಗಿದೆ. ಹೌದು, ಕೋಲ್ಕತ್ತಾದಲ್ಲಿ ನಡೆದ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ನೇತೃತ್ವವಹಿಸಿದ ಪ್ರಧಾನಿ ಮೋದಿ, ವಯಸ್ಸು ಹೆಚ್ಚಿದಂತೆಲ್ಲಾ ದೈಹಿಕ ಸ್ವಾಸ್ಥ್ಯ ಮತ್ತು ಮಾನಸಿಕ ನೆಮ್ಮದಿಯನ್ನು ವೃದ್ಧಿಸಿಕೊಳ್ಳಲು ಯೋಗದ ಮೊರೆ ಹೋಗುವಂತೆ ಕರೆ ನೀಡಿದರು.

■ ಕೋಲ್ಕತ್ತಾದ ಐತಿಹಾಸಿಕ ರೆಡ್ ರೋಡ್‌ನಲ್ಲಿ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ , ■ ಮೋದಿ ಚೈತನ್ಯಕ್ಕೆ ಯೋಗ ಮದ್ದು ■ ಮೋದಿ ಯೋಗಾಸನ ಸಂದೇಶ ■ 50ಕ್ಕಿಂತ 70ರ ವಯಸ್ಸಿನಲ್ಲಿ ಹೆಚ್ಚು ಆರೋಗ್ಯವಂತರಾಗೋಣ



• ಉದಯವಾಹಿನಿ, ನವದೆಹಲಿ

ಯೋಗವು ಕೇವಲ ದೇಹವನ್ನು ಸದೃಢಗಳಿಸುವ ಸಾಧನಾವಲ್ಲ. ಆರೋಗ್ಯಕರ ಮತ್ತು ಚೈತನ್ಯಭರಿತ ವೃದ್ಧಾಪ್ಯಕ್ಕೆ ದಾರಿಯಾಗಿದೆ ಎಂದು ಪ್ರಧಾನ ಮಂತ್ರಿ ನರೇಂದ್ರಮೋದಿ ವರ್ಣಿಸಿದ್ದಾರೆ. ವಯಸ್ಸು ಹೆಚ್ಚಾದಂತೆ ಅನಾರೋಗ್ಯವೂ ಹೆಚ್ಚಬೇಕು ಎಂಬ ಕಲ್ಪನೆಯನ್ನು ಬದಲಾಯಿಸುವ ಸಮಯ ಬಂದಿದೆ. ಯೋಗವು ಕೇವಲ ದೇಹವನ್ನು ಸದೃಢಗೊಳಿಸುವ ಸಾಧನವಲ್ಲ, ಆರೋಗ್ಯಕರ ಮತ್ತು ಚೈತನ್ಯಭರಿತ ವೃದ್ಧಾಪ್ಯಕ್ಕೆ ದಾರಿಯಾಗಿದೆ. 70ರ ವಯಸ್ಸಿನಲ್ಲಿ 50ರ ವಯಸ್ಸಿಗಿಂತ ಹೆಚ್ಚು ಆರೋಗ್ಯವಂತರಾಗಿರಬೇಕು. ಹೀಗಾಗಿ ಯೋಗವನ್ನು ಒಂದು ದಿನಕ್ಕೆ ಸೀಮಿತಗೊಳಿಸಬೇಡಿ, ಜೀವನದ ಭಾಗವಾಗಿಸಿಕೊಳ್ಳಿ ಎಂದು ಪ್ರಧಾನಿ ನರೇಂದ್ರ ಮೋದಿ ದೇಶದ ಜನತೆಗೆ ಕರೆ ನೀಡಿದ್ದಾರೆ.

ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ಕೋಲ್ಕತ್ತಾದ ಐತಿಹಾಸಿಕ ರೆಡ್ ರೋಡ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ' ಎಂಬ ಈ ವರ್ಷದ ವಿಷಯವನ್ನು ಉಲ್ಲೇಖಿಸಿದ ಅವರು, ವಯಸ್ಸು ಹೆಚ್ಚಾಗುವುದು ಸಹಜ ಪ್ರಕ್ರಿಯೆಯಾಗಿದ್ದರೂ, ಆರೋಗ್ಯ ಮತ್ತು ಸಾಮರ್ಥ್ಯ ಕುಗ್ಗುವುದು ಅನಿವಾರ್ಯವಲ್ಲ ಎಂದು ಹೇಳಿದರು.

ನಮ್ಮ ಗುರಿ 70ರ ವಯಸ್ಸಿನಲ್ಲಿ 50ರ ವಯಸ್ಸಿಗಿಂತ ಹೆಚ್ಚು ಜೀವನಶೈಲಿ ಕಾಯಿಲೆಗಳಿಗೆ ಪ್ರತಿರೋಧಕ ಶಕ್ತಿಯನ್ನು ಹೊಂದಿರುವುದಾಗಿರಬೇಕು. 40ರ ವಯಸ್ಸಿನಲ್ಲಿ 20ರ ವಯಸ್ಸಿಗಿಂತ ಹೆಚ್ಚು ಲವಲವಿಕೆ, 50ರ ವಯಸ್ಸಿನಲ್ಲಿ 30ರ ವಯಸ್ಸಿಗಿಂತ ಹೆಚ್ಚು ಚೈತನ್ಯ ಹೊಂದಿರಬೇಕು.

ಯೋಗವು ಈ ಗುರಿಗಳನ್ನು ಸಾಧಿಸಲು ನೆರವಾಗುವ ಶಕ್ತಿಶಾಲಿ ಸಾಧನವಾಗಿದೆ.

ಇದೇವೇಳೆ ಇತ್ತೀಚಿನ ವರ್ಷಗಳಲ್ಲಿ ಮಧುಮೇಹ, ರಕ್ತದೊತ್ತಡ, ಹೃದಯ ಸಂಬಂಧಿ ಸಮಸ್ಯೆಗಳು, ಸ್ಥೂಲಕಾಯತೆ ಹಾಗೂ ಒತ್ತಡದಿಂದ ಉಂಟಾಗುವ ಅನಾರೋಗ್ಯಗಳು ವೇಗವಾಗಿ ಹೆಚ್ಚುತ್ತಿರುವ ಬಗ್ಗೆ ಕಳವಳ ವ್ಯಕ್ತಪಡಿಸಿದ ಪ್ರಧಾನಿ, ಇಂತಹ ಜೀವನಶೈಲಿ ಕಾಯಿಲೆಗಳಿಂದ ದೂರವಿರಲು ಯೋಗ ಅತ್ಯಂತ ಪರಿಣಾಮಕಾರಿ ಮಾರ್ಗವಾಗಿದೆ ಎಂದು ಅಭಿಪ್ರಾಯಪಟ್ಟರು.

ನಿಯಮಿತ ಯೋಗಾಭ್ಯಾಸವು ದೇಹದ ಲವಚಿಕತೆಯನ್ನು ಹೆಚ್ಚಿಸುವುದರ ಜೊತೆಗೆ ಮಾನಸಿಕ ಆರೋಗ್ಯವನ್ನೂ ಉತ್ತಮಗೊಳಿಸುತ್ತದೆ ಎಂದು ತಿಳಿಸಿದರು.

ಯೋಗವು ಕೇವಲ ದೈಹಿಕ ವ್ಯಾಯಾಮವಲ್ಲ, ಅದು ದೇಹ, ಮನಸ್ಸು ಮತ್ತು ಆತ್ಮದ ನಡುವೆ ಸಮತೋಲನ ಸಾಧಿಸುವ ಸಮಗ್ರ ಜೀವನ ಪದ್ಧತಿ. ಪ್ರತಿದಿನ ಕೆಲ ನಿಮಿಷಗಳ ಯೋಗಾಭ್ಯಾಸವು ವ್ಯಕ್ತಿಯಲ್ಲಿ ಆತ್ಮವಿಶ್ವಾಸ ಹೆಚ್ಚಿಸುವುದರ ಜೊತೆಗೆ ಒತ್ತಡ ಮತ್ತು ಆತಂಕವನ್ನು ಕಡಿಮೆ ಮಾಡಲು ಸಹಕಾರಿಯಾಗುತ್ತದೆ.

ಯೋಗವು ನಮಗೆ ಆರೋಗ್ಯ ಮಾತ್ರ ನೀಡುವುದಿಲ್ಲ, ಅದು ಜೀವನವನ್ನು ನೋಡುವ ದೃಷ್ಟಿಕೋನವನ್ನೂ ಬದಲಿಸುತ್ತದೆ. ಯೋಗದ ಮೂಲಕ ನಾವು ದೈಹಿಕವಾಗಿ ಸದೃಢರಾಗುವುದರ ಜೊತೆಗೆ ಮಾನಸಿಕವಾಗಿ ಶಾಂತ ಮತ್ತು ಸಮತೋಲನಯುತ ವ್ಯಕ್ತಿಗಳಾಗಬಹುದು ಎಂದರು.

ಇದೇ ವೇಳೆ ಯೋಗ ದಿನವನ್ನು ಕೇವಲ ಒಂದು ದಿನದ ಆಚರಣೆಗೆ ಸೀಮಿತಗೊಳಿಸಬಾರದು ಎಂದು ಕರೆ ನೀಡಿದ ಮೋದಿ, ಪ್ರತಿಯೊಬ್ಬರೂ ಯೋಗವನ್ನು ತಮ್ಮ ದೈನಂದಿನ ಜೀವನದ ಭಾಗವಾಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕುಟುಂಬದ ಸದಸ್ಯರು, ಮಕ್ಕಳು ಮತ್ತು ಯುವಜನರಲ್ಲಿ ಯೋಗದ ಬಗ್ಗೆ ಆಸಕ್ತಿ ಮೂಡಿಸಿ ಅದನ್ನು ಮುಂದಿನ ಪೀಳಿಗೆಗೆ ತಲುಪಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹೇಳಿದರು.



### ನೆಮ್ಮದಿಗೆ ಯೋಗ ಸೂತ್ರ

ವರ್ತಮಾನ ಜಗತ್ತಿನ ಸ್ವಾಸ್ಥ್ಯ ಮತ್ತು ನೆಮ್ಮದಿಗೆ ಇರುವ ಏಕೈಕ ಮಾರ್ಗವೆಂದರೆ ಯೋಗ ಒಂದೇ ಆಗಿದೆ ಎಂದಿರುವ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು, ಸರ್ವರಿಗೂ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಹಾರ್ದಿಕ ಶುಭಾಶಯಗಳನ್ನು ಕೋರಿದ್ದಾರೆ.

ಮಾಡಿರುವ ಅವರು, ದೈಹಿಕ ಆರೋಗ್ಯ ಮತ್ತು ಮಾನಸಿಕ ಶಾಂತಿ ನೀಡುವ ಯೋಗವು ಪ್ರಾಚೀನ ಭಾರತದ ಶ್ರೇಷ್ಠ ಕೊಡುಗೆ ಎಂದಿದ್ದಾರೆ. ಪ್ರಧಾನಿ ಮೋದಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ಹಾಗೂ ಅವರ ಅವಿರತ ಶ್ರಮದಿಂದ ಯೋಗಕ್ಕೆ ಜಾಗತಿಕ ಮನ್ನಣೆ ದೊರೆತಿದೆ. ದೇಶ ವಿದೇಶಗಳಲ್ಲಿ ಜನರು ಯೋಗಾಭ್ಯಾಸ ಮಾಡುತ್ತಿದ್ದಾರೆ. ವಿಶ್ವಸಂಸ್ಥೆಯು 2014 ಜೂನ್ 21ರ ದಿನವನ್ನು ಅಂತಾರಾಷ್ಟ್ರೀಯ ಯೋಗ ದಿನವನ್ನಾಗಿ ಘೋಷಣೆ ಮಾಡಿದ್ದು, ಇದು ಭಾರತೀಯ ಪ್ರಾಚೀನ ಪರಂಪರೆಗೆ ದೊರೆತ ಮಹತ್ತರ ಜಾಗತಿಕ ಮನ್ನಣೆ ಎಂಬುದನ್ನು ನಾವು ಮರೆಯುವಂತಿಲ್ಲ. ನಾವೆಲ್ಲರೂ ಯೋಗವನ್ನು ನಮ್ಮ ದೈನಂದಿನ ಜೀವನದ ಭಾಗವಾಗಿಸಿಕೊಳ್ಳೋಣ.

**1** ಕೋಲ್ಕತ್ತಾದಲ್ಲಿ ನಡೆದ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪ್ರಧಾನಿ ಮೋದಿ ಭಾಗಿ.

**2** ಜೀವನದ ಎಲ್ಲಾ ಹಂತಗಳಲ್ಲೂ ಯೋಗ ಅಳವಡಿಕೆಯ ಮಹತ್ವವನ್ನು ಸಾರಿದ ಪ್ರಧಾನಿ ಮೋದಿ.

**3** ವಿಶೇಷ ಮರಳು ಅನಿಮೇಷನ್ ಮೂಲಕ ಯೋಗ ದಿನಾಚರಣೆ ಗುರುತಿಸಿದ ಕಲಾವಿದ ಮಾನಸ್ ಕುಮಾರ್.

### ಯೋಗದಿಂದ ಆನಂದಾನುಭವ



**ವಿಶ್ವದ ಅನೇಕ ದೇಶಗಳಲ್ಲಿ ಯೋಗ ಕಾರ್ಯಕ್ರಮ**

### ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಯೋಗ

ರಾಮಕೃಷ್ಣ ಪರಮಹಂಸ ಹಾಗೂ ಸ್ವಾಮಿ ವಿವೇಕಾನಂದರ ಕೊಡುಗೆಯನ್ನು ಪ್ರಶಂಸಿಸಿದರು. ಬಂಗಾಳದ ಈ ಪವಿತ್ರ ನೆಲವು ಭಾರತಕ್ಕೆ ಅನೇಕ ಮಹಾನ್ ಸಂತರು ಮತ್ತು ಚಿಂತಕರನ್ನು ನೀಡಿದೆ. ಸ್ವಾಮಿ ವಿವೇಕಾನಂದರು ಭಾರತೀಯ ಯೋಗ ಮತ್ತು ಆಧ್ಯಾತ್ಮಿಕತೆಯ ಸಂದೇಶವನ್ನು ಜಗತ್ತಿನಾದ್ಯಂತ ತಲುಪಿಸುವಲ್ಲಿ ಮಹತ್ವದ ಪಾತ್ರವಹಿಸಿದ್ದರು ಎಂದು ಹೇಳಿದರು. ತಮ್ಮ ಭಾಷಣದ ಕೊನೆಯಲ್ಲಿ, ಯೋಗವನ್ನು ಒಂದು ದಿನದ ಆಚರಣೆಯಾಗಿ ನೋಡದೆ, ಜೀವನದ ನಿರಂತರ ಅಭ್ಯಾಸವನ್ನಾಗಿ ಮಾಡೋಣ. ಆರೋಗ್ಯಕರ ವ್ಯಕ್ತಿ, ಆರೋಗ್ಯಕರ ಕುಟುಂಬ ಮತ್ತು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಯೋಗವನ್ನು ಅಳವಡಿಸಿಕೊಳ್ಳೋಣ ಎಂದು ದೇಶದ ಜನತೆಗೆ ಕರೆ ನೀಡಿದರು.

ಅಂತರರಾಷ್ಟ್ರೀಯ ಯೋಗ ದಿನದ ಅಂಗವಾಗಿ ದೇಶದ ವಿವಿಧ ರಾಜ್ಯಗಳು ಹಾಗೂ ವಿಶ್ವದ ಅನೇಕ ದೇಶಗಳಲ್ಲಿ ಯೋಗ ಕಾರ್ಯಕ್ರಮಗಳು ನಡೆಯುತ್ತಿದ್ದು, ಲಕ್ಷಾಂತರ ಜನರು ಯೋಗಾಭ್ಯಾಸದಲ್ಲಿ ಭಾಗವಹಿಸಿ ಆರೋಗ್ಯಕರ ಜೀವನಶೈಲಿಯ ಮಹತ್ವವನ್ನು ಸಾರುತ್ತಿದ್ದಾರೆ.

## ರಕ್ಷಣಾ ಕ್ಷೇತ್ರದಲ್ಲಿ ಭಾರತ ಇನ್ನು ಮುಂದೆ ಕೇವಲ ಖರೀದಿದಾರ ರಾಷ್ಟವಾಗಿ ಉಳಿಯಲ್ಲ

ರಕ್ಷಣಾ ಕ್ಷೇತ್ರದಲ್ಲಿ ಭಾರತ ಇನ್ನು ಮುಂದೆ ಕೇವಲ ಖರೀದಿದಾರ ರಾಷ್ಟ್ರವಾಗಿ ಉಳಿಯಲು ಬಯಸುವುದಿಲ್ಲ ಎಂದು ಪ್ರಧಾನಿ ಮೋದಿ ಮಹತ್ವದ ಹೇಳಿಕೆ ನೀಡಿದ್ದಾರೆ. ನೌಕಾಪಡೆಗೆ ಮೂರು ಸ್ವದೇಶಿ ನಿರ್ಮಿತ ನೌಕೆಗಳಾದ ದುನಗಿರಿ, ಸನ್ಶೋಧಕ್ ಹಾಗೂ ಜಲಾಂತರ್ಗಾಮಿ ವಿರೋಧಿ ಅಲ್ಪ ಆಳದ ಯುದ್ಧನೌಕೆ ಅಗ್ರಾಯ್ ಅನ್ನು ಲೋಕಾರ್ಪಣೆ ಮಾಡಿದ ಬಳಿಕ ಮಾತನಾಡದ ಪ್ರಧಾನಿ ಮೋದಿ, ಈ ಮೂರು ನೌಕೆಗಳು ಭಾರತದ ಮೂರು ಮಹತ್ವದ ಸಂಕಲ್ಪಗಳ ಸಂಕೇತಗಳಾಗಿವೆ. ಭಾರತ ಇನ್ನು ಮುಂದೆ ಕೇವಲ ಖರೀದಿದಾರ ರಾಷ್ಟ್ರವಾಗಿ ಉಳಿಯಲು ಬಯಸುವುದಿಲ್ಲ ಎಂದು ಹೇಳಿದರು.

ಈ ಮೂರು ನೌಕೆಗಳು ಭಾರತದಲ್ಲೇ ನಿರ್ಮಾಣಗೊಂಡಿದ್ದು, ಭಾರತದಲ್ಲೇ ವಿನ್ಯಾಸಗೊಳಿಸಲಾಗಿದೆ. ಭಾರತೀಯ ಕೈಗಾರಿಕೆಗಳ ಪ್ರತಿಭೆ, ಭಾರತೀಯ ಇಂಜಿನಿಯರ್‌ಗಳ ಕೌಶಲ್ಯ ಮತ್ತು ಭಾರತೀಯ ಕಾರ್ಮಿಕರ ಶ್ರಮದ ಫಲವೇ ಇವು.

ಹೊಸ ಭಾರತದ ಅತಿದೊಡ್ಡ ಶಕ್ತಿ ಇದೇ. ಇಂದು ಭಾರತ ರಕ್ಷಣಾ ಕ್ಷೇತ್ರದಲ್ಲಿ ಕೇವಲ ಖರೀದಿದಾರನಾಗಿ ಉಳಿಯಲು ಬಯಸುವುದಿಲ್ಲ. ನಮ್ಮ ಸೇನಾ ಸಾಮರ್ಥ್ಯ ವಿಶ್ವಕ್ಕೆ ಮಾರುಕಟ್ಟೆಯಾಗಬಾರದು. ನಮ್ಮ ಶಕ್ತಿಯ ವ್ಯಾಖ್ಯಾನ ವಿಶ್ವದ ಮಾರುಕಟ್ಟೆಯಾಗುವುದರಲ್ಲಿ ಇಲ್ಲ. ಸ್ವಾವಲಂಬಿಯಾಗುವುದರಲ್ಲಿದೆ ಎಂದು ಪ್ರಧಾನಿ ಮೋದಿ ಹೇಳಿದರು.

## ಅಡ್ಡಮತದಾನ: 2 ದಿನದಲ್ಲಿ ಸತ್ಯಶೋಧನಾ ಸಮಿತಿಯ ಪ್ರಾಥಮಿಕ ವರದಿ ಸಲ್ಲಿಸುತ್ತೇವೆ

• ಉದಯವಾಹಿನಿ,ಬೆಂಗಳೂರು

ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ, ಜೆಡಿಎಸ್ ಎರಡೂ ಪಕ್ಷಗಳೂ ಸೇರಿ 11 ಮತಗಳ ಕೊರತೆ ಮತ್ತು 1 ಮತ ಕುಲಗೆಟ್ಟಿದೆ. ಒಟ್ಟು 12 ಮತಗಳ ವ್ಯತ್ಯಾಸ ಆಗಿರುವುದು ಕಂಡು ಬಂದಿದೆ. ಪ್ರಾಥಮಿಕ ಮಾಹಿತಿ ಕಲೆ ಹಾಕಿದ್ದು, ಒಂದೆರಡು ದಿನಗಳಲ್ಲಿ ಪ್ರಾಥಮಿಕ ವರದಿ ನೀಡುತ್ತೇವೆ ಎಂದು ವಿಧಾನ ಪರಿಷತ್ ಬಿಜೆಪಿ ಸದಸ್ಯ ಸಿ.ಟಿ.ರವಿ ಹೇಳಿದ್ದಾರೆ.

ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, ರಾಜ್ಯಾಧ್ಯಕ್ಷರು 19ರಂದು ಫೋನ್ ಮಾಡಿದ್ದರು. ಸತ್ಯಶೋಧನಾ ಸಮಿತಿ ರಚಿಸಿ, ಈ ಎಲ್ಲದರ ಬಗ್ಗೆ ಪರಿಶೀಲನೆ ಮಾಡಿ ವರದಿ ಸಲ್ಲಿಸುವಂತೆ ತಿಳಿಸಿದ್ದರು. ಅದೇ ರೀತಿ ರಾಷ್ಟ್ರೀಯ ಅಧ್ಯಕ್ಷರು ಕೂಡ ಹೇಳಿದ್ದಾರೆ. ಪಕ್ಷ ಇದನ್ನು ಗಂಭೀರವಾಗಿ ಪರಿಗಣಿಸಿದೆ. ನಮ್ಮ ತಂಡದಲ್ಲಿ ನಾನು, ಮಹೇಶ ತೆಂಗಿನಕಾಯಿ, ಎನ್.ಮಹೇಶ ಇದ್ದೇವೆ. ತಕ್ಷಣವೇ ಮೂವರು ವರ್ಚುವಲ್ ಮೂಲಕ ಸಭೆ ಸೇರಿ, ವ್ಯಕ್ತಿಗತ ಮಾತುಕತೆ ಪ್ರಾರಂಭಿಸಿದ್ದೇವೆ. ಪ್ರಾಥಮಿಕ ಮಾಹಿತಿ ಕಲೆ ಹಾಕಿದ್ದೇವೆ.

## ಡಿಕೆಶಿ ಯಾವೂರಿಗೆ ಚಾಣಾಕ್ಷ..? ಸಿಎಂ ವಿರುದ್ಧ ಆರ್. ಅಶೋಕ್ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಚಾಣಕ್ಯ ಎಂದೂ ಕುದುರೆ ವ್ಯಾಪಾರ ಮಾಡುತ್ತಿರಲಿಲ್ಲ. ಈಗ ಕುದುರೆ ವ್ಯಾಪಾರ ಮಾಡುವ ಡಿಕೆಶಿ ಚಾಣಕ್ಯ ಆಗಲು ಹೇಗೆ ಸಾಧ್ಯ ಎಂದು ವಿಪಕ್ಷ ನಾಯಕ ಆರ್. ಅಶೋಕ್ ಲೇವಡಿ ಮಾಡಿದರು.

ವಿಧಾನ ಪರಿಷತ್ ಚುನಾವಣೆ ಬಳಿಕ ಸಿಎಂ ಡಿಕೆಶಿ ತಂತ್ರ, ಚಾಣಕ್ಯ ತಂತ್ರ ಎಂದು ಬಣ್ಣಿಸುತ್ತಿರುವ ವಿಚಾರಕ್ಕೆ ಬೆಳಗಾವಿಯಲ್ಲಿ ಪ್ರತಿಕ್ರಿಯಿಸಿದ ಅವರು, ಡಿಕೆಶಿ ಚಾಣಾಕ್ಷ ಯಾವೂರಿಗೆ..? ನಾವು 17 ಜನ ಶಾಸಕರನ್ನು ಕರೆದುಕೊಂಡು ಹೋದಾಗ ಈ ಚಾಣಕ್ಯ ಎಲ್ಲಿದ್ದ? ಡಿಕೆಶಿ ಆಗ ಮಂತ್ರಿ ಇದ್ದರು. ಆಗ ನಮ್ಮ ಜೊತೆಗೆ ಅವರ ಶಾಸಕರು ಬಂದಿದ್ದರು ಎಂದು ತಿರುಗೇಟು ಕೊಟ್ಟರು. ವಿಪಕ್ಷ ನಾಯಕ ಆರ್. ಅಶೋಕ್ ಅವರ ಪ್ರತಿಕ್ರಿಯೆ 2019ರಲ್ಲಿ ಕಾಂಗ್ರೆಸ್ ಶಾಸಕರು ಮುಂಬೈಗೆ ಹೋದಾಗ ಇದೇ ಕಾಂಗ್ರೆಸ್ ನಾಯಕರು ಕುದುರೆ ವ್ಯಾಪಾರ ಅಂದಿದ್ದರು. ನಮ್ಮ ಜೊತೆಗೆ ಕಾಂಗ್ರೆಸ್ ಶಾಸಕರು ಬಂದಾಗ ಆಪರೇಷನ್ ಕಮಲ ಅಂತಾ ಹೇಳಿದ್ದೀರಿ. ನಮಗೆ ಬುದ್ಧಿ ಹೇಳ್ತಿರಾ? ಈಗ ನೀವು ಮಾಡಿದ್ದೇನು? ನಾಚಿಕೆ ಆಗಲ್ಲವಾ..? ಕಾಂಗ್ರೆಸ್‌ಗೆ ಇದು ತಿರುಗುಬಾಣ ಆಗುತ್ತದೆ. ನಾವೇ ಉತ್ತರ ಕೊಡುತ್ತೇವೆ ಎಂದು ಆರ್.ಅಶೋಕ್ ಕೈ ನಾಯಕರಿಗೆ ಎಚ್ಚರಿಕೆ ಕೊಟ್ಟರು.

ಪರಿಷತ್ ಚುನಾವಣೆಯಲ್ಲಿ ಪಕ್ಷಕ್ಕೆ ದ್ರೋಹ, ವಂಚನೆ ಬಗೆದಿರುವುದು ನಿಜ. ಯಾವ ಶಾಸಕ ದ್ರೋಹ ಮಾಡಿದ್ದಾರೆ ಗೊತ್ತಿಲ್ಲ. ಆ ಕಾರಣಕ್ಕೆ ಅಧ್ಯಕ್ಷರ ಜೊತೆಗೆ ಮಾತನಾಡುತ್ತೇವೆ.

## ಶಾಸಕರ ಮತದಾನದಲ್ಲಿ ಎರಡು ನಿಯಮವೇಕೆ?: ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಶಾಸಕ ಎಸ್. ಸುರೇಶ್ ಕುಮಾರ್ ಪತ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯಸಭೆ ಮತ್ತು ವಿಧಾನ ಪರಿಷತ್ ಚುನಾವಣೆಗಳಲ್ಲಿ ಶಾಸಕರು ಮತ ಚಲಾಯಿಸುವ ನಿಯಮಾವಳಿಗಳಲ್ಲಿರುವ ದ್ವಂದ್ವ ನೀತಿಯನ್ನು ಪ್ರಶ್ನಿಸಿ ರಾಜಾಜಿನಗರ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ಎಸ್.ಸುರೇಶ್ ಕುಮಾರ್ ರಾಜ್ಯ ಮುಖ್ಯ ಚುನಾವಣಾಧಿಕಾರಿಗೆ ಪತ್ರ ಬರೆದಿದ್ದಾರೆ. ಒಂದೇ ದಿನ ಎರಡು ಚುನಾವಣೆಗಳು ನಡೆದರೆ ಶಾಸಕರು ಎರಡು ಬೇರೆ ಬೇರೆ ರೀತಿಯ ನಿಯಮ ಪಾಲಿಸಬೇಕಾದ ಗೊಂದಲದ ಬಗ್ಗೆ ಅವರು ಪತ್ರದಲ್ಲಿ ಸ್ಪಷ್ಟೀಕರಣ ಕೋರಿದ್ದಾರೆ. ಇತ್ತೀಚೆಗೆ ನಡೆದ ರಾಜ್ಯಸಭೆ ಹಾಗೂ ವಿಧಾನ ಪರಿಷತ್ ಚುನಾವಣೆಗಳ ಹಿನ್ನೆಲೆಯಲ್ಲಿ, ಶಾಸಕರು (ಮತದಾರರ ನೆಲೆಯಲ್ಲಿ) ವರ್ತಿಸಬೇಕಾದ ನಿಯಮಗಳಲ್ಲಿರುವ ವ್ಯತ್ಯಾಸಗಳ ಬಗ್ಗೆ ಸುರೇಶ್ ಕುಮಾರ್ ಪ್ರಶ್ನೆ ಮಾಡಿದ್ದಾರೆ. ಈ ಕುರಿತು ರಾಜ್ಯ ಮುಖ್ಯ ಚುನಾವಣಾಧಿಕಾರಿಗಳಿಗೆ ಪತ್ರ ಬರೆದಿರುವ ಅವರು, ಈ ನಿಯಮಾವಳಿ ಗಳ ಹಿಂದಿರುವ ಅಸಲಿ ಉದ್ದೇಶವೇನು ಎಂದು ಪ್ರಶ್ನಿಸಿದ್ದಾರೆ.

ಇತ್ತೀಚೆಗೆ ನಮ್ಮ ರಾಜ್ಯದಿಂದ ರಾಜ್ಯಸಭೆಯ 4 ಸ್ಥಾನಗಳಿಗೆ ಹಾಗೂ ವಿಧಾನ ಪರಿಷತ್ತಿನ ಏಳು ಸ್ಥಾನಗಳಿಗೆ ಚುನಾವಣೆಗಳು ನಡೆದಿದ್ದವು. ರಾಜ್ಯಸಭೆ ಮತ್ತು ವಿಧಾನ ಪರಿಷತ್ ಎರಡೂ ಚುನಾವಣೆ ಗಳಿಗೂ ವಿಧಾನ ಸಭಾ ಸದಸ್ಯರೇ ಮತದಾರರಾಗಿದ್ದಾರೆ.

ಆದರೆ, ರಾಜ್ಯಸಭೆ ಚುನಾವಣೆಯಲ್ಲಿ ಶಾಸಕರು ಮತ ಚಲಾಯಿಸುವಾಗ ತಾವು ಗುರುತು ಮಾಡಿದ ಮತಪತ್ರವನ್ನು ಅಲ್ಲಿ ಕುಳಿತಿರುವ ತಮ್ಮ ಪಕ್ಷದ ಏಜೆಂಟರಿಗೆ ಕಡ್ಡಾಯವಾಗಿ ತೋರಿಸಿ ಹಾಕ ಬೇಕಿರುತ್ತದೆ.

## ತಡವಾಗಿ ಬಂದ ಕಾರಣ ನೀಟ್ ಪರೀಕ್ಷೆಗೆ ನೋ ಎಂಟ್ರಿ; ಕಣ್ಣೀರಿಟ್ಟ ವಿದ್ಯಾರ್ಥಿನಿಯರು

• ಉದಯವಾಹಿನಿ,ಬೆಂಗಳೂರು

ನೀಟ್ ಮರುಪರೀಕ್ಷೆ ಬರೆಯಲು ತಡವಾಗಿ ಬಂದ ಕಾರಣ ಪರೀಕ್ಷೆಗೆ ಅವಕಾಶ ಸಿಗದೆ ವಿದ್ಯಾರ್ಥಿನಿಯರು ನಿರಾಸೆಯಿಂದ ಕಣ್ಣೀರಿಟ್ಟು ಮನೆಗೆ ಮರಳಿದ ಘಟನೆ ಬೆಂಗಳೂರು ಮತ್ತು ಕೊಪ್ಪಳದಲ್ಲಿ ನಡೆದಿದೆ. ಬೆಂಗಳೂರಿನ ಆರ್‌ಸಿ ಕಾಲೇಜು ಪರೀಕ್ಷಾ ಕೇಂದ್ರದಲ್ಲಿ ಮೂವರು ವಿದ್ಯಾರ್ಥಿನಿಯರಿಗೆ ಪರೀಕ್ಷೆ ಬರೆಯಲು ಅವಕಾಶ ಸಿಗಲಿಲ್ಲ. ನಿಗದಿತ ಸಮಯದ ಬಳಿಕ ಕೇಂದ್ರಕ್ಕೆ ಬಂದ ಕಾರಣ ಅಧಿಕಾರಿಗಳು ಪ್ರವೇಶ ನಿರಾಕರಿಸಿದರು. ಬಸ್ ಸಮಸ್ಯೆ ಟ್ರಾಫಿಕ್ ದಟ್ಟಣೆ ಕಾರಣದಿಂದ ತಡವಾಗಿದೆ ಎಂದು ವಿದ್ಯಾರ್ಥಿನಿಯರು ಮತ್ತು ಅವರ ಕುಟುಂಬಸ್ಥರು ಗೇಟ್ ಬಳಿ ಮನವಿ ಮಾಡಿಕೊಂಡರೂ ಯಾವುದೇ ಪ್ರಯೋಜನವಾಗಲಿಲ್ಲ. ಗಂಗಾವತಿ ಮೂಲದ ಫಾತಿಮಾ ಎಂಬ ವಿದ್ಯಾರ್ಥಿನಿ ನೀಟ್ ಮರುಪರೀಕ್ಷೆ ಬರೆಯಲು ಕೊಪ್ಪಳದ ಪ್ರಥಮ ದರ್ಜೆ ಕಾಲೇಜಿನ ಪರೀಕ್ಷಾ ಕೇಂದ್ರಕ್ಕೆ ಬಂದಿದ್ದಳು. ಕೇಂದ್ರಕ್ಕೆ ಆಗಮಿಸಿದ್ದ ಫಾತಿಮಾಗೆ ಪ್ರವೇಶ ನಿರಾಕರಿಸಲಾಯಿತು.

## ವ್ಯಕ್ತಿಗತ ಘೋಷಣೆ ಕೂಗಿದರೆ ಶಿಸ್ತು ಕ್ರಮ: ಖರ್ಗೆ

• ಉದಯವಾಹಿನಿ, ಬೆಂಗಳೂರು



ಕಾಂಗ್ರೆಸ್‌ನಲ್ಲಿ ಶಿಸ್ತು ಬಹಳ ಮುಖ್ಯ. ಕಾರ್ಯಕ್ರಮದ ನಡುವೆ ಯಾರಾದರು ವ್ಯಕ್ತಿಗತ ವರ್ಚಸ್ಸಿಗಾಗಿ ಘೋಷಣೆ ಕೂಗಿದರೆ, ಶಿಸ್ತು ಕ್ರಮ ಕೈಗೊಳ್ಳುವುದಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕಠಿಣ ಎಚ್ಚರಿಕೆ ನೀಡಿದ್ದಾರೆ. ನಗರದ ಅರಮನೆ ಮೈದಾನದಲ್ಲಿ ನಡೆದ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರ ಪದಗ್ರಹಣ ಸಮಾರಂಭದಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಮಾತನಾಡುತ್ತಾ, ಡಿ.ಕೆ.ಶಿವಕುಮಾರ್ ಈ ಹಿಂದೆ ಆರೂವರೆ ವರ್ಷ ಪಕ್ಷದ ಅಧ್ಯಕ್ಷರಾಗಿ ಕೆಲಸ ನಿರ್ವಹಿಸಿದ್ದರು. ಈಗ ಮುಖ್ಯಮಂತ್ರಿಯಾದ ಮೇಲೆ ಎನ್ನುತ್ತಿದ್ದಂತೆ ಸಭಾಂಗಣದಲ್ಲಿ ಇದ್ದ ಕಾರ್ಯಕರ್ತರು, ಮುಖಂಡರ ಪೈಕಿ ಡಿಕೆ ಡಿಕೆ ಎಂದು ಘೋಷಣೆ ಕೂಗಿದರು.

ವೇದಿಕೆಯಲ್ಲೇ ಇದ್ದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ತಕ್ಷಣವೇ ಎದ್ದು ನಿಂತು ಘೋಷಣೆ ಕೂಗದಂತೆ ಕೈ ಸನ್ನೆ ಮಾಡಿದರು. ಘೋಷಣೆಗಳಿಂದ ಮುಜುಗರಕ್ಕೊಳಗಾದ ಮಲ್ಲಿಕಾರ್ಜುನ ಖರ್ಗೆ ಅವರು ನಿಮದೆಲ್ಲಾ ಮುಗಿಯಿತೇ? ಮುಂದೆ ಇರುವ ಒಂದು ಗುಂಪಿನಲ್ಲಿ ಮಾತ್ರ ಈ ರೀತಿ ಘೋಷಣೆ ಕೇಳಿ ಬರುತ್ತಿದೆ. ಇಲ್ಲಿ ನಿಂತು ಕೆಲವರು ಘೋಷಣೆ ಕೂಗಿದರೆ, ದೇಶವೇ ನಮ ಕೈಗೆ ಬಂದಾಂತಾಗುತ್ತದೆಯೇ? ಯೂಸ್ ಲೆಸ್ ಫೆಲೋಸ್ ಎಂದು ಖಾರವಾಗಿ ಹೇಳಿದರು.ಇದು ಒಬ್ಬ ವ್ಯಕ್ತಿಯ ಸಭೆಯಲ್ಲ, ಎಲ್ಲರೂ ಸೇರಿ ಪಕ್ಷವನ್ನು ಬಲಗೊಳಿಸಬೇಕು. ಒಬ್ಬರ ಹೆಸರನ್ನು ಮಾತ್ರ ಕೂಗಿದರೆ ಉಳಿದವರು ಕಸ ಗುಡಿಸಲು ಬಂದಿದ್ದಾರೆಯೇ? ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕಾಂಗ್ರೆಸ್‌ನಲ್ಲಿ ಶಿಸ್ತು ಬಹಳ ಮುಖ್ಯ. 58 ವರ್ಷಗಳ ತಮ ರಾಜಕೀಯ ಜೀವನದಲ್ಲಿ ಬಹಳ ಏರುಪೇರುಗಳನ್ನು ನೋಡಿದ್ದೇನೆ. ಅನೇಕರು ಕಾಂಗ್ರೆಸ್‌ನಿಂದ ನಾಯಕರಾಗಿದ್ದಾರೆ. ಕಾಂಗ್ರೆಸ್‌ಗೆ ಅವರ ಕೊಡುಗೆ ಕಡಿಮೆ ಇದ್ದರೂ, ಪಕ್ಷ ಅವರಿಗೆ ಶಕ್ತಿ ನೀಡಿದೆ ಎಂದು ಹೇಳಿದರು. ಈ ರೀತಿಯ ಘೋಷಣೆ ಕೂಗುವವರ ವಿರುದ್ಧ ದೃಶ್ಯಾವಳಿಗಳನ್ನು ಆಧರಿಸಿ ಶಿಸ್ತು ಕ್ರಮ ಜರುಗಿಸುತ್ತೇನೆ ಎಂದು ಎಚ್ಚರಿಕೆ ನೀಡಿದರು. ಇದು ಅತ್ಯಂತ ಮಹತ್ವದ ಸಭೆ. ಶಿಸ್ತು ಪಾಲನೆ ಮಾಡಿ ಎಂದು ಹೇಳಿದರು. ಬಿ.ಕೆ.ಹರಿಪ್ರಸಾದ್ ಮತ್ತು ಡಿ.ಕೆ. ಶಿವಕುಮಾರ್ ಅವರ ಜೋಡಿಯಿಂದ ಪಕ್ಷ ಸಂಘಟನೆ ಬಲಗೊಳ್ಳಲಿದೆ.

## ತಮಿಳುನಾಡು ರಾಜಕೀಯ ಪಕ್ಷಗಳು ಕರ್ನಾಟಕದ ಮೇಲೆ ದಬ್ಬಾಳಿಕೆ : ಹೆಚ್.ಡಿ. ಕುಮಾರಸ್ವಾಮಿ ಕಿಡಿ

• ಉದಯವಾಹಿನಿ, ಬೆಂಗಳೂರು




ಜೂನ್ 2026 ಕರ್ನಾಟಕದಲ್ಲಿ ಬರ ಪರಿಸ್ಥಿತಿ ಸೃಷ್ಟಿಯಾಗಿರುವುದು ಎಲ್ಲರಿಗೂ ಗೊತ್ತಿರುವ ವಿಚಾರವೇ. ಹೀಗಿದ್ದರೂ ನೆರೆಯ ತಮಿಳುನಾಡು ಕಾವೇರಿ ವಿಚಾರದಲ್ಲಿ ಖ್ಯಾತೆ ತೆಗೆದಿರುವುದು ಸರಿಯಲ್ಲ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಖಾತೆ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ತೀವ್ರ ಬೇಸರ ವ್ಯಕ್ತಪಡಿಸಿದರು. ಅಂತರಾಷ್ಟ್ರೀಯ ಯೋಗ ದಿನಾಚರಣೆಯ ನಂತರ ಮಾಧ್ಯಮಗಳ ಜೊತೆ ಮಾತನಾಡಿದ ಕೇಂದ್ರ ಸಚಿವರು ತಮಿಳುನಾಡು ಕ್ಯಾತೆ ತೆಗೆಯುತ್ತಿರುವುದು ಇದೇ ಮೊದಲಲ್ಲ. ಕಳೆದ 50 ವರ್ಷದಿಂದಲೂ ಕಾವೇರಿ ವಿಚಾರದಲ್ಲಿ ಸಮಸ್ಯೆ ಸೃಷ್ಟಿ ಮಾಡುತ್ತಿದೆ. ತಮಿಳುನಾಡು ರಾಜ್ಯಕ್ಕೆ ನಿಗದಿಗಿಂತ ಎರಡು ಪಟ್ಟು ನೀರು ಕೊಟ್ಟಿದ್ದು ಇದೆ. ಅವರು ಅದನ್ನು ನೆನಪು ಮಾಡಿಕೊಳ್ಳುವುದಿಲ್ಲ. ಜಲಾಶಯಗಳು ತುಂಬಿದಾಗ ಯಥೇಚ್ಛವಾಗಿ ಆ ರಾಜ್ಯಕ್ಕೆ ನೀರು ಹರಿದು ಹೋಗಿದೆ. ಮಳೆ ಆಗದೆ ಜಲಾಶಯಗಳು ಖಾಲಿ ಬಿದ್ದಾಗ ಆ ರಾಜ್ಯವು ನಮ್ಮ ಮೇಲೆ ನೀರಿಗಾಗಿ ಒತ್ತಡ ಉಕ್ತವಲ್ಲ ಎಂದು ಹೇಳಿದರು. ವಾಸ್ತವ ಪರಿಸ್ಥಿತಿಯನ್ನು ತಮಿಳುನಾಡಿನವರು ಅರ್ಥ ಮಾಡಿಕೊಳ್ಳಬೇಕು. ನೆರೆಹೊರೆ ರಾಜ್ಯಗಳಲ್ಲಿ ವಾಸ ಮಾಡುವ ನಾವು ಅಣ್ಣ ತಮ್ಮಂದಿರ ರೀತಿ ಇರಬೇಕು. ಒಕ್ಕೂಟ ವ್ಯವಸ್ಥೆಯಲ್ಲಿ ತಿಕ್ಕಾಟ ನಡೆಸುವುದು ಸರಿಯಲ್ಲ. ಇರುವ ಪರಿಸ್ಥಿತಿಯನ್ನು ಅರಿತು ಪರಸ್ಪರ ಹಂಚಿಕೊಂಡು ನಡೆದರೆ ಎರಡು ರಾಜ್ಯಗಳಿಗೂ ಉತ್ತಮ ಎಂಬುದನ್ನು ತಮಿಳುನಾಡು ತಿಳಿದುಕೊಳ್ಳಬೇಕು. ಹೊರತುಪಡಿಸಿ ಕಾಲು ಕೆರೆದು ಜಗಳಕ್ಕೆ ಬರುವುದು ಒಳ್ಳೆಯ ನಡೆ ಅಲ್ಲ ಎಂದು ಕುಮಾರಸ್ವಾಮಿ ಅವರು ಅಭಿಪ್ರಾಯಪಟ್ಟರು.

ಕರ್ನಾಟಕಕ್ಕೆ ಎಲ್ಲಾ ಕಡೆಗಳಿಂದಲೂ ನಿರಂತರವಾಗಿ ಅನ್ಯಾಯ ಆಗುತ್ತದೆ. ನಮ್ಮ ರಾಜ್ಯದ ಜನರ ಹಣದಲ್ಲಿ ಕೃಷ್ಣರಾಜಸಾಗರ, ಕಬಿನಿ, ಹಾರಂಗಿ, ಹೇಮಾವತಿ ಸೇರಿದಂತೆ ಎಲ್ಲಾ ಅಣೆಕಟ್ಟುಗಳನ್ನು ನಿರ್ಮಾಣ ಮಾಡಿದ್ದೇವೆ. ನಮ್ಮ ಹಣದಲ್ಲಿ ಕಷ್ಟಪಟ್ಟು ಅಣೆಕಟ್ಟೆ ಕಟ್ಟಿಕೊಂಡರೆ ಅವುಗಳನ್ನು ಪಕ್ಕದ ರಾಜ್ಯಗಳಿಗೆ ನೀರು ಯಂತ್ರಗಳನ್ನಾಗಿ ಮಾಡಿಕೊಂಡಿದ್ದೇವೆ. ಅಂತಹ ಪರಿಸ್ಥಿತಿ ಸೃಷ್ಟಿಯಾಗಲು ರಾಜ್ಯದ ವೈಫಲ್ಯವು ಇದೆ ಎಂದು ಸಚಿವರು ಬೇಸರ ವ್ಯಕ್ತಪಡಿಸಿದರು.

## 'ಕಾಂಗ್ರೆಸ್ ಪಕ್ಷವನ್ನು ಶಕ್ತಿಯುತವಾಗಿ ಬೆಳೆಸೋಣ': ಕೆಪಿಸಿಸಿ ಅಧ್ಯಕ್ಷರಾಗಿ ಬಿ.ಕೆ.ಹರಿಪ್ರಸಾದ್ ಪದಗ್ರಹಣ

• ಉದಯವಾಹಿನಿ, ಬೆಂಗಳೂರು




ನಗರದ ಅರಮನೆ ಮೈದಾನದಲ್ಲಿ ಇಂದು ನಡೆದ ಸಂಕಲ್ಪ ಸಮಾವೇಶದಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿ ಬಿ.ಕೆ.ಹರಿಪ್ರಸಾದ್ ಅಧಿಕೃತವಾಗಿ ಪದಗ್ರಹಣ ಮಾಡಿದರು. ಸಿಎಂ ಡಿ.ಕೆ.ಶಿವಕುಮಾರ್ ನೂತನ ಅಧ್ಯಕ್ಷರಿಗೆ ಕಾಂಗ್ರೆಸ್ ಬಾವುಟ ಹಸ್ತಾಂತರಿಸಿದರು. ನಾವೆಲ್ಲರೂ ಒಟ್ಟಾಗಿ ಕೆಲಸ ಮಾಡುತ್ತೇವೆ. ಪದಗ್ರಹಣದ ಬಳಿಕ ಮಾತನಾಡಿದ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ನನ್ನ ಜೀವನದ ಮಹತ್ವಪೂರ್ಣ ದಿನ ಇದು. 141 ವರ್ಷಗಳ ಪವಿತ್ರ ಪಕ್ಷ ಕಾಂಗ್ರೆಸ್ ಇದರ ಜವಾಬ್ದಾರಿ ವಹಿಸಿಕೊಳ್ಳಲು ಸೋನಿಯಾ ಗಾಂಧಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ವೇಣುಗೋಪಾಲ, ಸುರ್ಜೆವಾಲಾ ಪ್ರಮುಖ ಕಾರಣ. ಇವರಿಗೆಲ್ಲ ಶತಕೋಟಿ ನಮಸ್ಕಾರ. ಇದು ಪವಿತ್ರವಾದ ಪಕ್ಷ, ಇದು ದೇವಸ್ಥಾನದಲ್ಲೋ, ಮಸೀದಿಯಲ್ಲೋ, ಚರ್ಚಿನಲ್ಲೋ ಇಲ್ಲ. ಬ್ರಿಟಿಷರ ಕೆಳಗಡೆ ಗುಲಾಮಗಿರಿ ಇದ್ದಾಗ ಹೋರಾಟ ಮಾಡಿದೆ. ಹಲವು ಧರ್ಮಗಳು ಇರುವ ಬಹುತ್ವದ ರಾಷ್ಟ್ರ ಇದು. ಮಹಾತ್ಮಾ ಗಾಂಧಿ ಪರಿಕಲ್ಪನೆ ಅಡಿಯಲ್ಲಿ ನಿರ್ಮಾಣವಾದ ರಾಷ್ಟ್ರ ಇದು ಎಂದರು. ನಮ್ಮ ಮುಂದೆ ದೊಡ್ಡ ಸವಾಲಿದೆ. 2028 ವಿಧಾನಸಭೆ, 2029ರ ಲೋಕಸಭೆ ಚುನಾವಣೆ ಇದೆ. ಸ್ವಾತಂತ್ರ್ಯ ಹೋರಾಟದ ಪರಂಪರೆ ಇರುವ ಪಕ್ಷ ಕಾಂಗ್ರೆಸ್. ಸ್ವಾತಂತ್ರ್ಯ ಹೋರಾಟದಲ್ಲಿ ಯಾವುದೇ ಕೊಡುಗೆ ಇಲ್ಲದ ಪಕ್ಷ ಬಿಜೆಪಿ, ಆರ್‌ಎಸ್‌ಎಸ್ ನಮ್ಮ ಮುಂದೆ ದೊಡ್ಡ ಸವಾಲನ್ನೇ ತಂದಿಟ್ಟಿದ್ದಾರೆ. ಸಾಂವಿಧಾನಿಕ ಸಂಸ್ಥೆಗಳನ್ನು ಆಯುಧಗಳಾಗಿ ಮಾಡಿಕೊಂಡಿದ್ದಾರೆ. ತ್ರಿವರ್ಣ ಧ್ವಜದ ವಿರುದ್ಧ ಇದ್ದವರು ವಾಮ ಮಾರ್ಗದ ಮೂಲಕ ಅಧಿಕಾರ ಹಿಡಿದು ಸಂವಿಧಾನವನ್ನೇ ಮುಗಿಸಲು ಹೊರಟಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ನಮ್ಮ ಜಾತಿ ಕಾಂಗ್ರೆಸ್, ನಮ್ಮ ಪವಿತ್ರ ಧರ್ಮ ಸಂವಿಧಾನ. ದೇಶದಲ್ಲಿ ಯಾವುದೂ ಅಧಿಕೃತ ಧರ್ಮವಿಲ್ಲ. ಯಾರಿಗೂ ಸಹ ಧರ್ಮಾಚರಣೆಗೆ ನಿರ್ಬಂಧ ಇಲ್ಲ. ಯಾವುದೇ ಭಾಷೆ ಮಾತಾಡಲು ನಿರ್ಬಂಧ ಇಲ್ಲ. ಬಿಜೆಪಿ ಆರ್‌ಎಸ್‌ಎಸ್ ಧರ್ಮಾಧಾರಿತ ರಾಜಕಾರಣ ಮಾಡ್ತಿದ್ದಾರೆ. ಇದರಿಂದ ಶಾಂತಿ ಕದಡುವ ಕೆಲಸ ಮಾಡುತ್ತಿದ್ದಾರೆ.

ಗುಡಿ, ಚರ್ಚು, ಮಸೀದಿಗಳ ಬಿಟ್ಟು ಹೊರಬನ್ನಿ ಎಂದು ಕುವೆಂಪು ಹೇಳಿದ್ದಾರೆ. ಅದನ್ನು ಸಾಕ್ಷಾತ್ ಜಾರಿ ಮಾಡಲು ನಾವು ಹೋರಾಟ ಮಾಡಬೇಕಿದೆ. ಕೋಮುವಾದ ಹರಡಲು ಯಾರೂ ಬಿಡಬಾರದು ಎಂದು ಕರೆ ನೀಡಿದರು. ನಾವೇನಾದರೂ ಸ್ವಲ್ಪ ಎಚ್ಚರ ತಪ್ಪಿದರೆ ಪೂರ್ವಜರು ತಂದುಕೊಟ್ಟ ಸ್ವಾತಂತ್ರ್ಯವನ್ನೇ ನಿರ್ನಾಮ ಮಾಡಲು ಕಾಯುತ್ತಿದ್ದಾರೆ. ಗೋಡ್ಸೆ ಒಬ್ಬ ಭಯೋತ್ಪಾದಕ, ಕೊಲೆಗಾರ ಎಂದು ಇದುವರೆಗೆ ಬಿಜೆಪಿ ಹೇಳಿಲ್ಲ. ಖರ್ಗೆ ಅವರು ಹೇಳಿದ ಕಿವಿ ಮಾತಿನಂತೆ ಸಿಎಂ ಡಿಕೆಶಿ ಹಾಗೂ ನಾನು ಒಟ್ಟಿಗೆ ಕೆಲಸ ಮಾಡುತ್ತೇವೆ. ಧೈರ್ಯವಾಗಿ, ಸ್ಥೈರ್ಯವಾಗಿ ಕೆಲಸ ಮಾಡಿ ಮುನ್ನುಗ್ಗಬೇಕು. ಕಾಂಗ್ರೆಸ್ ಪಕ್ಷವನ್ನು ಶಕ್ತಿಯುತವಾಗಿ ಬೆಳೆಸಿ, ಸಂವಿಧಾನ, ಪ್ರಜಾಪ್ರಭುತ್ವ, ಜಾತ್ಯಾತೀತತೆಯನ್ನು ಉಳಿಸಿಕೊಳ್ಳುವಂಥ ಕೆಲಸ ಮಾಡುವ ಸಂಕಲ್ಪ ಮಾಡೋಣ ಎಂದು ಕರೆ ನೀಡಿದರು.

### ನಿಗಮ ಮಂಡಳಿಗೆ ಹೊಸ ನೇಮಕಾತಿ ಮಾಡಿ

ಎರಡೂವರೆ ವರ್ಷ ಆಯ್ತು ನಿಗಮ ಮಂಡಳಿಗಳ ಅಧ್ಯಕ್ಷರು ಹಾಗೂ ಸದಸ್ಯರು ಹಾಗೇ ಮುಂದುವರಿದಿದ್ದಾರೆ. ಅವರಿಂದ ರಾಜೀನಾಮೆ ಪಡೆದು ಹೊಸಬರಿಗೆ ಅವಕಾಶ ಕೊಡಿ. ಸಿದ್ದರಾಮಯ್ಯ ಅವರ ಒಂದನೇ ಇನ್ನಿಂಗ್ಸ್ ಆಯ್ತು. ಈಗ ಎರಡನೇ ಇನ್ನಿಂಗ್ಸ್ ಆಡಬೇಕಾದರೆ, ಪಿಚ್ ಹೇಗಿದೆ ಎಂದು ನೋಡಬೇಕಾದರೆ ಹೊಸ ಕಾರ್ಯಕರ್ತರಿಗೆ ಹೊಸ ಜವಾಬ್ದಾರಿ ಕೊಡಬೇಕು ಎಂದು ಇದೇ ವೇಳೆ ಮನವಿ ಮಾಡಿದರು. ನನ್ನ ರಾಜಕೀಯ ಜೀವನದಲ್ಲಿ ವಿಧಾನಸೌಧದಲ್ಲಿ, ಸಂಸತ್ತಿನಲ್ಲಿ ಶಿಫಾರಸು ಪತ್ರ ಇಟ್ಟುಕೊಂಡು ಓಡಾಡಿದವನಲ್ಲ. ನಾನು ದೊಡ್ಡ ಜಾತಿಯಿಂದ ಬಂದವನಲ್ಲ. ಬಂಡವಾಳ ಶಾಹಿ ಅಲ್ಲ. ನಾನೊಬ್ಬ ಸಾಮಾನ್ಯ ಕಾರ್ಯಕರ್ತನಾಗಿ ಮೇಲೆ ಬಂದಿದ್ದೇನೆ.

**ಈ ದಿನದ ದರ** ಪೆಟ್ರೋಲ್: 110.61 ₹/L ಡೀಸೆಲ್ : 98.80₹/L ಬಂಗಾರ: ₹ 14,608/Gram 24ct ₹13,390/Gram 22ct ಬೆಳ್ಳಿ: ₹250.00/Gram

# ಸಹಾಯಕ ಇಂಜಿನಿಯರ್ ಅಮಾನತು, ಅಧಿಕಾರಿಗಳಿಗೆ ಸಚಿವ ಕೃಷ್ಣ ಬೈರೇಗೌಡ ಖಡಕ್ ಎಚ್ಚರಿಕೆ..!

• ಉದಯವಾಹಿನಿ, ಬೆಂಗಳೂರು

ನಗರದ ರಸ್ತೆಗಳಲ್ಲಿ ಗುಂಡಿ ಮುಚ್ಚುವಿಕೆ ಹಾಗೂ ಡಾಂಬರೀಕರಣ ಕಾಮಗಾರಿಗಳ ಕಳಪೆ ಗುಣಮಟ್ಟದ ಬಗ್ಗೆ ಇತ್ತೀಚೆಗೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡಿದ್ದ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣ ಬೈರೇಗೌಡ ಅವರು ಇದೀಗ ಮತ್ತೊಂದು ಕಠಿಣ ಕ್ರಮ ಕೈಗೊಂಡಿದ್ದಾರೆ.

ಕಳಪೆ ರಸ್ತೆ ಕಾಮಗಾರಿ ನಡೆಸಿದ ಆರೋಪದ ಹಿನ್ನೆಲೆಯಲ್ಲಿ ಬಿಬಿಎಂಪಿಯ ಸಹಾಯಕ ಇಂಜಿನಿಯರ್‌ರನ್ನು ಅಮಾನತುಗೊಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಸಂಪಂಗಿರಾಮನಗರ ಪ್ರದೇಶದಲ್ಲಿ ನಡೆದ ರಸ್ತೆ ಡಾಂಬರೀಕರಣ ಕಾಮಗಾರಿಯ ಗುಣಮಟ್ಟದ ಬಗ್ಗೆ ಅನುಮಾನ ವ್ಯಕ್ತಪಡಿಸಿದ ಸಚಿವರು, ಬೆಂಗಳೂರು ಕೇಂದ್ರ ನಗರ ನಿಗಮ ಆಯುಕ್ತರಿಗೆ ತಕ್ಷಣ ಪರಿಶೀಲನೆ ನಡೆಸುವಂತೆ ಸೂಚಿಸಿದರು. ಪರಿಶೀಲನೆಯ ವೇಳೆ ಕಾಮಗಾರಿ ನಿಗದಿತ ಗುಣಮಟ್ಟದ ಮಾನದಂಡಗಳಿಗೆ ಅನುಗುಣವಾಗಿಲ್ಲ ಎಂಬುದು ಬೆಳಕಿಗೆ ಬಂದಿದೆ. ಈ ಹಿನ್ನೆಲೆಯಲ್ಲಿ ಕಾಮಗಾರಿಯ ಮೇಲ್ವಿಚಾರಣೆ ಹೊಣೆ ಹೊತ್ತಿದ್ದ ಸಹಾಯಕ ಇಂಜಿನಿಯರ್ ಪೂಜಾರಪ್ಪ ಅವರನ್ನು ಅಮಾನತುಗೊಳಿಸಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಕೃಷ್ಣ ಬೈರೇಗೌಡ, ಇಂತಹ ಕ್ರಮವನ್ನು ಆಗಾಗ್ಗೆ ಕೈಗೊಳ್ಳುವ ಪರಿಸ್ಥಿತಿ ಬರಬಾರದು ಎಂದು ನಾನು ಆಶಿಸುತ್ತೇನೆ.

ಆದರೆ ಅಧಿಕಾರಿಗಳು ಮತ್ತು ಗುತ್ತಿಗೆದಾರರು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸದಿದ್ದರೆ, ಇಂತಹ ಕ್ರಮಗಳನ್ನು ಕೈಗೊಳ್ಳುವುದು ಅನಿವಾರ್ಯವಾಗುತ್ತದೆ. ಎಲ್ಲರೂ ತಮ್ಮ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸಬೇಕು'' ಎಂದು ಎಚ್ಚರಿಕೆ ನೀಡಿದರು. ಅಮಾನತು ಆದೇಶದ ಪ್ರಕಾರ, ರಸ್ತೆ ಡಾಂಬರೀಕರಣ ಕಾಮಗಾರಿಯ ಮೇಲ್ವಿಚಾರಣೆಯ ಜವಾಬ್ದಾರಿ ಹೊಂದಿದ್ದ ಸಹಾಯಕ ಇಂಜಿನಿಯರ್ ಪೂಜಾರಪ್ಪ ಅವರು ಗುತ್ತಿಗೆದಾರರೊಂದಿಗೆ ಶಾಮೀಲಾಗಿರುವುದು ಕಂಡುಬಂದಿದೆ. ಡಾಂಬರ್ ಮಿಶ್ರಣದ ಸರಿಯಾದ ಪ್ರಮಾಣ ಹಾಗೂ ರಸ್ತೆಯ ದಪ್ಪವನ್ನು ಖಚಿತಪಡಿಸದೇ ನಿರ್ಲಕ್ಷ್ಯ ವಹಿಸಿರುವುದರಿಂದ ನಿಗಮಕ್ಕೆ ಆರ್ಥಿಕ ನಷ್ಟ ಉಂಟಾಗಿದೆ ಎಂದು ಆರೋಪಿಸಲಾಗಿದೆ.

> ನಗರದ ರಸ್ತೆ ಕಾಮಗಾರಿಗಳ ಗುಣಮಟ್ಟದ ಬಗ್ಗೆ ಸಾರ್ವಜನಿಕರಿಂದ ನಿರಂತರ ದೂರುಗಳು ಬರುತ್ತಿರುವ ಹಿನ್ನೆಲೆ, ಇಂತಹ ನಿರ್ಲಕ್ಷ್ಯ ಸಹಿಸುವುದಿಲ್ಲ ಎಂಬ ಸಂದೇಶವನ್ನು ಸರ್ಕಾರ ಈ ಕ್ರಮದ ಮೂಲಕ ರವಾನಿಸಿದೆ. ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ನಡೆಸದಿದ್ದರೆ ಕಠಿಣ ಕ್ರಮ ಎದುರಿಸಬೇಕಾಗುತ್ತದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

## ನಾಗಸಂದ್ರ ಮೆಟ್ರೋ ನಿಲ್ದಾಣದಲ್ಲಿ ಅಗ್ನಿ ಅವಘಡ; ಮೆಟ್ರೋ ಸಂಚಾರಕ್ಕೆ ವ್ಯತ್ಯಯ ಇಲ್ಲ

• ಉದಯವಾಹಿನಿ,ಬೆಂಗಳೂರು

ಭಾನುವಾರ ಮಧ್ಯಾಹ್ನ ಬೆಂಗಳೂರಿನ ನಮ್ಮ ಮೆಟ್ರೊ ಜಾಲದ ನಾಗಸಂದ್ರ ಮೆಟ್ರೊ ನಿಲ್ದಾಣದಲ್ಲಿ ಸಣ್ಣ ಪ್ರಮಾಣದ ಬೆಂಕಿ ಕಾಣಿಸಿಕೊಂಡಿದ್ದು, ನಿಲ್ದಾಣದ ಆವರಣದಿಂದ ಹೊಗೆ ಮತ್ತು ಜ್ವಾಲೆಗಳು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಪ್ರಯಾಣಿಕರಲ್ಲಿ ಆತಂಕ ಉಂಟಾಯಿತು. ಈ ಘಟನೆ ಗ್ರೀನ್ ಲೈನ್‌ನ ಮಾದಾವರ ಮೆಟ್ರೊ ನಿಲ್ದಾಣ ಸಿಲ್ಕ್ ಇನ್ಸ್ಟಿಟ್ಯೂಟ್ ಮೆಟ್ರೊ ನಿಲ್ದಾಣ ಮಾರ್ಗದಲ್ಲಿರುವ ನಾಗಸಂದ್ರ ಮೆಟ್ರೋ ನಿಲ್ದಾಣದಲ್ಲಿ ನಡೆದಿದೆ. ಬೆಂಗಳೂರು ಮೆಟ್ರೊ ರೈಲು ನಿಗಮ ನೀಡಿದ ಮಾಹಿತಿಯ ಪ್ರಕಾರ, ಮಧ್ಯಾಹ್ನ ಸುಮಾರು 1.30 ಗಂಟೆಗೆ ನಿಲ್ದಾಣದ ತುರ್ತು ನಿರ್ಗಮನ ಪ್ರದೇಶದ ಸಮೀಪದ ಒಂದು ಸೂಚನಾ ಫಲಕಕ್ಕೆ ಬೆಂಕಿ ತಗುಲಿತ್ತು.

ಘಟನಾ ಸ್ಥಳದ ದೃಶ್ಯಗಳಲ್ಲಿ ನಿಲ್ದಾಣದ ಒಂದು ಭಾಗದಿಂದ ದಟ್ಟ ಹೊಗೆ ಮತ್ತು ಜ್ವಾಲೆಗಳು ಎದ್ದಿರುವುದು ಕಂಡುಬಂದಿದ್ದು, ಸುತ್ತಮುತ್ತಲಿನ ನಿವಾಸಿಗಳು ಹಾಗೂ ಪ್ರಯಾಣಿಕರ ಗಮನ ಸೆಳೆಯಿತು. ಸುರಕ್ಷತೆ ಕುರಿತು ಕೆಲ ಆತಂಕಗಳು ವ್ಯಕ್ತವಾಗಿದ್ದವು.

## ನಿಯಮ ಸಡಿಲಿಸಿದ ರಾಜ್ಯ ಸರ್ಕಾರ: ಓಸಿ ಇಲ್ಲದ ಕಟ್ಟಡಗಳಿಗೆ ವಿದ್ಯುತ್ ಪಡೆಯಲು 15 ದಿನಗಳ ಕಾಲಾವಕಾಶ..!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮೇ 31, 2026ರೊಳಗೆ ನಿರ್ಮಾಣ ಪೂರ್ಣಗೊಂಡಿರುವ ಕಟ್ಟಡಗಳ ಮಾಲೀಕರಿಗೆ ವಿಶೇಷ ವಿನಾಯಿತಿಯಡಿ ವಿದ್ಯುತ್ ಸಂಪರ್ಕ ಪಡೆಯಲು 15 ದಿನಗಳ ಕಾಲಾವಕಾಶ ನೀಡಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಘೋಷಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿದ ಮುಖ್ಯಮಂತ್ರಿಗಳು, ಸರ್ಕಾರದ ಆದೇಶ ಹೊರಬಿದ್ದ ದಿನಾಂಕದಿಂದ ಈ 15 ದಿನಗಳ ಅವಧಿ ಆರಂಭವಾಗಲಿದೆ. ವಿದ್ಯುತ್ ಸಂಪರ್ಕಕ್ಕಾಗಿ ಅರ್ಜಿ ಸಲ್ಲಿಸುವ ಕಟ್ಟಡ ಮಾಲೀಕರು ತಮ್ಮ ಕಟ್ಟಡದ ಛಾಯಾಚಿತ್ರಗಳು ಹಾಗೂ ಜಿಪಿಎಸ್ ಆಧಾರಿತ ಸ್ಥಳ ಮಾಹಿತಿ ಸಲ್ಲಿಸುವುದು ಕಡ್ಡಾಯವಾಗಿದೆ ಎಂದು ಹೇಳಿದ್ದಾರೆ. ಆಕ್ಯುಪೆನ್ಸಿ ಸರ್ಟಿಫಿಕೇಟ್ ಮತ್ತು ಕಂಪ್ಲೀಷನ್ ಸರ್ಟಿಫಿಕೇಟ್ (ಸಂಬಂಧಿತ ನಿಯಮಗಳನ್ನು ನಾವು ಸರಳಗೊಳಿಸಿದ್ದೇವೆ. ಮೊದಲಿಗೆ ಮೇ 31, 2026ರೊಳಗೆ ಕಟ್ಟಡ ನಿರ್ಮಾಣ ಅನುಮತಿಗೆ ಅರ್ಜಿ ಸಲ್ಲಿಸಿದ್ದವರಿಗೆ ಮಾತ್ರ ಈ ಸೌಲಭ್ಯ ನೀಡಲು ನಿರ್ಧರಿಸಲಾಗಿತ್ತು. ಆದರೆ, ಇದು ಪ್ರಾಯೋಗಿಕವಾಗಿ ಸಾಧ್ಯವಿಲ್ಲ ಎಂದು ಗುತ್ತಿಗೆದಾರರು ಮತ್ತು ನಿರ್ಮಾಣ ಕ್ಷೇತ್ರದ ಪ್ರತಿನಿಧಿಗಳು ತಿಳಿಸಿದ್ದರು.

ಹೀಗಾಗಿ ಸರ್ಕಾರ ನಿಯಮಗಳಲ್ಲಿ ಬದಲಾವಣೆ ಮಾಡಲಾಗಿದೆ ಎಂದು ವಿವರಿಸಿದ್ದಾರೆ. ಕೆಲವು ಗ್ರಾಮೀಣ ಪ್ರದೇಶಗಳ ಕಟ್ಟಡಗಳಿಗೂ ವಿನಾಯಿತಿ ನೀಡಲಾಗಿದೆ. ರೇಷ್ಮೆ ಸಾಕಾಣಿಕೆ ಶೆಡ್‌ಗಳು, ಜಾನುವಾರು ಶೆಡ್‌ಗಳು ಸೇರಿದಂತೆ ಕೆಲವು ಕೃಷಿ ಸಂಬಂಧಿತ ಕಟ್ಟಡಗಳಿಗೆ ವಿಶೇಷ ಸಡಿಲಿಕೆ ನೀಡಲಾಗುವುದು ಎಂದು ಹೇಳಿದರು. ಆದರೆ, ಹೊಸದಾಗಿ ನಿರ್ಮಾಣವಾಗುವ ಕಟ್ಟಡಗಳಿಗೆ ಈ ವಿನಾಯಿತಿ ಅನ್ವಯಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಈ ನಿರ್ಧಾರ ಕೈಗೊಳ್ಳುವ ಮೊದಲು ಇಂಧನ, ಗ್ರಾಮೀಣಾಭಿವೃದ್ಧಿ ಹಾಗೂ ನಗರಾಭಿವೃದ್ಧಿ ಸಚಿವರೊಂದಿಗೆ ಸಮಾಲೋಚನೆ ನಡೆಸಲಾಗಿದೆ.

## ರೌಡಿಗಳ ಮನೆ ಮೇಲೆ ಹಠಾತ್ ದಾಳಿ

• ಉದಯವಾಹಿನಿ, ಬೆಂಗಳೂರು

ನಗರ ಉತ್ತರ ವಿಭಾಗದ 13 ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ರೌಡಿಗಳ ಮೇಲೆ ಇಂದು ಮುಂಜಾನೆ ದಿಢೀರ್ ದಾಳಿ ನಡೆಸಿ ಶೋಧ ಕೈಗೊಂಡು ಅಪರಾಧ ನಡೆಸುವುದಾಗಲಿ, ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗದಂತೆ ಕಟ್ಟುನಿಟ್ಟಿನ ಎಚ್ಚರಿಕೆ ನೀಡಲಾಗಿದೆ.ರೌಡಿ ನಿಗ್ರಹ ಪಡೆಗಳೊಂದಿಗೆ ಹಿರಿಯ ಪೊಲೀಸ್ ಅಧಿಕಾರಿಗಳು ವಿಶೇಷ ಕಾರ್ಯಾಚರಣೆಯನ್ನು ನಡೆಸಿ, 13 ಪೊಲೀಸ್ ಠಾಣಾ ರೌಡಿ ಮನೆಗಳ ದಿಢೀರ್ ಮೇಲೆ ದಾಳಿ ನಡೆಸಲಾಗಿದೆ. 97 ರೌಡಿಗಳ ಮನೆಗಳ ಮೇಲೆ ದಾಳಿ ನಡೆಸಿ. ಅವರುಗಳ ಉದ್ಯೋಗ ಕೆಲಸದ ಬಗ್ಗೆ ಮಾಹಿತಿ ಸಂಗ್ರಹಿಸಿ, ಅವರುಗಳ ವಿರುದ್ಧ ಈ ಹಿಂದೆ ದಾಖಲಾಗಿರುವ ಪ್ರಕರಣಗಳಲ್ಲಿ ನ್ಯಾಯಾಲಯಕ್ಕೆ ಹಾಜರಾಗುತ್ತಿರುವ ಬಗ್ಗೆ ಹಾಗೂ ಪ್ರಕರಣಗಳಲ್ಲಿ ವಿಚಾರಣೆಗೆ ಹಾಜರಾಗದೇ ವಾರೆಂಟ್, ಪ್ರೋಕ್ಲಮೇಷನ್, ಎಲ್ ಪಿ.ಆರ್ ಆಗಿರುವ ಬಗ್ಗೆ ಪರಿಶೀಲನೆ ನಡೆಸಲಾಗಿದೆ. ನ್ಯಾಯಾಲಯದ ವಿಚಾರಣೆ ವೇಳೆ ತಪ್ಪದೇ ಹಾಜರಾಗಲು ಸೂಚಿಸಲಾಯಿತು. ಅವರುಗಳಿಗೆ ಯಾವುದೇ ರೀತಿಯ ಕಾನೂನು ಬಾಹಿರ ಚಟುವಟಿಕೆ ಮತ್ತು ಅಪರಾಧಗಳಲ್ಲಿ ಭಾಗಿಯಾಗದಂತೆ ಡಿಸಿಪಿ ನೇಮಗೌಡ ನೇತೃತ್ವದ ಸಿಬ್ಬಂದಿ ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದಾರೆ.

ಉತ್ತರ ವಿಭಾಗದ ಎಲ್ಲಾ ಸಹಾಯಕ ಪೊಲೀಸ್ ಆಯುಕ್ತರುಗಳು, 13 ಪೊಲೀಸ್ ಠಾಣೆಗಳ ಪೊಲೀಸ್ ಇನ್ಸ್‌ಪೆಕ್ಟರ್ ರವರುಗಳು ಮತ್ತು ಉತ್ತರ ವಿಭಾಗದ ರೌಡಿ ನಿಗ್ರಹ ಪಡೆಗಳು ವಿಶೇಷ ಕಾರ್ಯಾಚರಣೆ ಕೈಗೊಂಡು ಒಟ್ಟು 97 ರೌಡಿ ವ್ಯಕ್ತಿಗಳನ್ನು ಪರಿಶೀಲಿಸಲಾಗಿರುತ್ತದೆ. ಎರಡು ವರ್ಷಗಳು ಕಳೆದರೂ ಪ್ರತಿವಾದಿಗಳಲ್ಲಿ ಯಾರೂ ತಮ್ಮ ಪ್ರತಿಕ್ರಿಯೆ ಸಲ್ಲಿಸಿಲ್ಲ. ಇದು ಕೊನೆಯ ಅವಕಾಶ. ಕೇರಳ, ಕರ್ನಾಟಕ ಮತ್ತು ತಮಿಳುನಾಡು ರಾಜ್ಯಗಳು ತಮ್ಮ ತಮ್ಮ ವರದಿಗಳನ್ನು ಸಲ್ಲಿಸಬೇಕು. ವಿಫಲವಾದರೆ ನ್ಯಾಯಮಂಡಳಿ ಸ್ವಯಂಪ್ರೇರಿತವಾಗಿ ಆದೇಶ ಹೊರಡಿಸಲಿದೆ ಎಂದು ಪೀಠ ತನ್ನ ಆದೇಶದಲ್ಲಿ ತಿಳಿಸಿದೆ.

## ಯೋಗ ಭಾರತೀಯ ಸಂಸ್ಕೃತಿಯ ಪರಂಪರೆ

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಪಕ್ಷದ ವತಿಯಿಂದ 12ನೇ ಅಂತರಾಷ್ಟ್ರೀಯ ಯೋಗ ದಿನಾಚರಣೆಗೆ ಲೋಕಸಭಾ ಸದಸ್ಯ ತೇಜಸ್ವಿಸೂರ್ಯ, ದಕ್ಷಿಣ ಜಿಲ್ಲಾ ಬಿಜೆಪಿ ಉಪಾಧ್ಯಕ್ಷರು, ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಕೆ.ಉಮೇಶ್ ಶೆಟ್ಟಿ, ಬ್ರಹ್ಮಕುಮಾರಿ, ಲೀಲಕ್ಕಾರವರು ಯೋಗಗುರು ನಾರಾಯಣ್,ಶಂಕರ್ ಮಂಡಲ ಅಧ್ಯಕ್ಷ ಮಂಜುನಾಥ್ ಎನ್.ಬಿ, ರಾಮಪ್ಪರವರು ದೀಪ ಬೆಳಗಿಸಿ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ತೇಜಸ್ವಿಸೂರ್ಯ ಮಾತನಾಡಿ ದೇಶ ಸುರಕ್ಷತೆ ಇದೆ ಎಂದರೆ ವೀರಯೋಧರು ಕಾರಣ ಅವರು ಪ್ರಾಣದ ಹಂಗು ತೊರೆದು ನಮ್ಮೆಲ್ಲರ ಜೀವ ರಕ್ಷಣೆ ಮಾಡುತ್ತಿದ್ದಾರೆ. ಯೋಗ ಭಾರತೀಯ ಸಂಸ್ಕೃತಿ, ಪರಂಪರೆ ಇರುವ ಯೋಗ ವಿಶ್ವಕ್ಕೆ ಕೊಡುಗೆಯಾಗಿ ನೀಡಿದೆ, ಯೋಗಕ್ಕೆ ಜಾತಿ, ಮತ, ಧರ್ಮ ಭೇಧವಿಲ್ಲ. ಮನಸ್ಸು ದೇಹ, ಬುದ್ಧಿ ಒಂದು ಮಾಡುವ ಕ್ರಿಯ ಪದ್ಧತಿ ಸಾವಿರಾರು ವರ್ಷಗಳ ಇತಿಹಾಸವಿದೆ. ಯೋಗ ಮಾಡಬೇಕಾದರೆ ಅದರ ಅನುಭವ ಪಡೆಯಲು ಉಸಿರು, ಮನಸ್ಸು ಒಂದಾಗಬೇಕು. ನಮ್ಮ ತಾಯಿಯವರಿಗೆ ಅಸ್ತಮಾ ಸಮಸ್ಯೆ ಇತ್ತು ಯೋಗ ಮಾಡುವುದರಿಂದ ಅಸ್ತಮಾ ರೋಗ ತಡೆಯಲು ಸಾಧ್ಯವಾಯಿತು. ಮಕ್ಕಳು, ಯುವ ಸಮುದಾಯ ಮೊಬೈಲ್‌ಗಳಿಂದ ದೂರವಿರಿ, ಮಾನಸಿಕ ಒತ್ತಡ, ನೆನಪಿನ ಶಕ್ತಿ, ಆರೋಗ್ಯವಂತ ದೇಹ ಹೊಂದಲು ಪ್ರತಿದಿನ 30ನಿಮಿಷ ಯೋಗ ಮತ್ತು 1ಗಂಟೆ ಧ್ಯಾನ ಮಾಡಿದಾಗ ರೋಗದಿಂದ ಮುಕ್ತರಾಗಬಹುದು. ಪ್ರಧಾನಿ ನರೇಂದ್ರಮೋದಿರವರು ಯೋಗದ ಮಹತ್ವಸಾರಲು ಇಂದು 182ರಾಷ್ಟ್ರಗಳಲ್ಲಿ ಯೋಗ ದಿನಾಚರಣೆ ಅಚರಿಸಲಾಗುತ್ತಿದೆ ಎಂದು ಹೇಳಿದರು.

# ನಾಟಕ ನಿಲ್ಲಿಸಿ, ದಾಹ ತೀರಿಸಿ

ಜಲಮಂಡಳಿಯ ಈ ಗಂಭೀರ ಆತಂಕಕ್ಕೆ ನಿಮ್ಮ ಸರ್ಕಾರದ ಪೂರ್ವಸಿದ್ಧತೆ ಏನು?


ಉದಯವಾಹಿನಿ ಚಿತ್ರ

### ಟ್ಯಾಂಕರ್ ಮಾಫಿಯಾ

ಕಳೆದ ವರ್ಷವೂ ಇದೇ ರೀತಿ ಕಣ್ಣುಮುಚ್ಚಿ ಕುಳಿತು ಇಡೀ ಬೆಂಗಳೂರನ್ನು ಟ್ಯಾಂಕರ್ ಮಾಫಿಯಾ ಕೈಗೆ ಇಟ್ಟು ಜನಸಾಮಾನ್ಯರನ್ನು ಲೂಟಿ ಮಾಡಸಿದ್ದನ್ನ ಜನರು ಮರೆತಿಲ್ಲ. ಈ ಬಾರಿಯೂ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳದೆ ಕಾಲಹರಣ ಮಾಡುತ್ತಿರುವುದು ನೋಡಿದರೆ, ಮತ್ತೊಮ್ಮೆ ಟ್ಯಾಂಕರ್ ಮಾಫಿಯಾ ಜೇಬು ತುಂಬಿಸಲು ಬೆಂಗೂರಿಗರನ್ನು ಬಲಿಪಶು ಮಾಡಲು ಹೊರಟದ್ದೀರಾ ಇಂದು ವಾಗ್ದಾಳಿ ನಡೆದಿದ್ದಾರೆ

> ನಿಮ್ಮನ್ನು ರೀಲ್ಸ್ ಮಂತ್ರಿ ಎಂದು ಆಡಿಕೊಳ್ಳುತ್ತಿದ್ದಾರೆ. ಎಸಿ ರೂಮಿನಲ್ಲಿ ಕೂತು ಅಧಿಕಾರಿಗಳ ಮೇಲೆ ಕ್ಯಾಮೆರಾ ಮುಂದೆ ಗರಂ ಆಗಿ, ಅದನ್ನೇ ರೀಲ್ಸ್ ಮಾಡಿ ಸೋಶಿಯಲ್ ಮೀಡಿಯಾದಲ್ಲಿ ಹರಿಬಿಟ್ಟರೆ ಮುಗಿಯಿತೇ ನಿಮ್ಮ ಜವಾಬ್ದಾರಿ ಇದಕ್ಕಾಗಿಯೇ ಕನ್ನಡಿಗರು ನಿಮಗೆ ಅಧಿಕಾರ ಕೊಟ್ಟದ್ದು?
> ವಿಪಕ್ಷ ಆರ್.ಅಶೋಕ್

### ಸದುಪಯೋಗ ಮಾಡಿ

ಬೆಂಗಳೂರಿನ ಮೂಲಸೌಕರ್ಯ ರಿಪೇರಿಯ ಹೆಸರಿನಲ್ಲಿ ನೀವು ಘೋಷಿಸಿದ 2,000 ಕೋಟಿ ಹಣವನ್ನ ಸದುಪಯೋಗ ಮಾಡಿ ಜನರ ನಿತ್ಯ ಸಮಸ್ಯೆಗಳನ್ನು ಪರಿಹರಿಸುವತ್ತ ಗಮನ ಹರಿಸಿ ಎಂದು ಆಗ್ರಹಿಸಿದ್ದಾರೆ.

1 ಮುಂಗಾರು ಆರಂಭದಲ್ಲೇ ಕೈಕೊಟ್ಟಿದೆ
2 ಕಳೆದ ವರ್ಷವೂ ಇದೇ ರೀತಿ
3 ನೀರಿನ ಭೀಕರ ಪರಿಸ್ಥಿತಿ ಎಷ್ಟು ಭೀಕರವಾಗಿದೆ

ಕ್ಯಾಮೆರಾ ಮುಂದೆ ಬಿಲ್ಡಪ್ ನಾಟಕ ಆಡುವುದನ್ನು ನಿಲ್ಲಿಸಿ

• ಉಯವಾಹಿನಿ,ಬೆಂಗಳೂರು

ರೀಲ್ಸ್ ಮಂತ್ರಿ ಕೃಷ್ಣ ಬೈರೇಗೌಡ ಅವರೇ, ಕೇವಲ ಸೋಶಿಯಲ್ ಮೀಡಿಯಾದಲ್ಲಿ ಪೋಸ್ ಕೊಟ್ಟು ಅಧಿಕಾರಿಗಳ ಮೇಲೆ ಕಿರುಚಾಡುವ ರೀಲ್ಸ್ ಮಾಡಿದರೆ ಬೆಂಗಳೂರಿನ ದಾಹ ತೀರುವುದಿಲ್ಲ. ಕ್ಯಾಮೆರಾ ಮುಂದೆ ಬಿಲ್ಡಪ್ ನಾಟಕ ಆಡುವುದನ್ನು ನಿಲ್ಲಿಸಿ.

ಇಡೀ ಬೆಂಗಳೂರು ನೀರಿಲ್ಲದೆ ತತ್ತರಿಸುವ ಮುನ್ನವೇ ಎಚ್ಚೆತ್ತುಕೊಂಡು ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಿ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಆಗ್ರಹಿಸಿದ್ದಾರೆ ಜನಸಾಮಾನ್ಯರನ್ನು ಮತ್ತೊಮ್ಮೆ ಟ್ಯಾಂಕರ್ ಮಾಫಿಯಾದ ದಬ್ಬಾಳಿಕೆಗೆ ತಳ್ಳಿದರೆ, ಜನಸಾಮಾನ್ಯರು ನಿಮ್ಮ ಮನೆಗಳಿಗೆ, ಕಚೇರಿಗಳಿಗೆ ಮುತ್ತಿಗೆ ಹಾಕುವುದು ನಿಶ್ಚಿತ ಎಂದು ಅವರು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ

ಮುಂಗಾರು ಆರಂಭದಲ್ಲೇ ಕೈಕೊಟ್ಟಿದೆ. ಕೆಆರ್‌ಎಸ್ ಮತ್ತು ಕಬಿನಿ ಜಲಾಶಯಗಳಲ್ಲಿ ನೀರಿನ ಸಂಗ್ರಹ ಕಳೆದ ವರ್ಷಕ್ಕಿಂತ ಅರ್ಧದಷ್ಟು ಕುಸಿದಿದೆ.

ಜಲಮಂಡಳಿಯೇ ಈಗ ಆತಂಕಗೊಂಡು ಕಾವೇರಿ ನಿಗಮಕ್ಕೆ 9.56 ಟಿಎಂಸಿ ನೀರು ಕಾಯ್ದಿರಿಸುವಂತೆ ಪತ್ರ ಬರೆಯುತ್ತಿದೆ ಎಂದರೆ, ರಾಜಧಾನಿ ಬೆಂಗಳೂರಿಗೆ ಮುಂದಿನ ದಿನಗಳಲ್ಲಿ ಕಾದಿರುವ ಕುಡಿಯುವ ನೀರಿನ ಭೀಕರ ಪರಿಸ್ಥಿತಿ ಎಷ್ಟು ಭೀಕರವಾಗಿದೆ ಎಂಬ ಅರಿವು ನಿಮಗಿದೆಯೇ ಎಂದು ಪ್ರಶ್ನಿಸಿದ್ದಾರೆ.

1.50 ಕೋಟಿ ಜನಸಂಖ್ಯೆ ಇರುವ ಬೆಂಗಳೂರಿಗೆ ಪರ್ಯಾಯ ನೀರಿನ ವ್ಯವಸ್ಥೆ ಮಾಡಲು ನೀವೇನು ಯೋಜನೆ ರೂಪಿಸಿದ್ದೀರಾ? ಎಂದು ಆರ್ ಅಶೋಕ್ ಪ್ರಶ್ನಿಸಿದ್ದಾರೆಅಧಿಕಾರಿಗಳನ್ನು ಬೈದು ಬಿಲ್ಡಪ್ ಕೊಟ್ಟು, ರೀಲ್ಸ್ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಬಿಟ್ಟರೆ ಬೆಂಗಳೂರಿನ ಸಮಸ್ಯೆಗಳು ಪರಿಹಾರವಾಗುವುದಿಲ್ಲ ಸ್ವಾಮಿ!

ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣ ಬೈರೇ ಗೌಡ ಅವರೇ, ನಿಮ್ಮ ಈ ಚೀಪ್ ಪಬ್ಲಿಸಿಟಿ ಗಿಮಿಕ್‌ಗಳನ್ನು ನೋಡಿ ಜನ ಈಗ ನಗುತ್ತಿದ್ದಾರೆ.



## ಪ್ರತಿಭಾ ಪುರಸ್ಕಾರ ಮತ್ತು ವಿದ್ಯಾರ್ಥಿ ವೇತನ ವಿತರಣೆ ಸಾಧಕರಿಗೆ ಸನ್ಮಾನ ಕಾರ್ಯಕ್ರಮ: ಕುವೆಂಪು ವಾರ್ಡ್


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮಲ್ಲೇಶ್ವರ ವಿಧಾನಸಭಾ ಕ್ಷೇತ್ರ: ಕುವೆಂಪು ವಾರ್ಡ್ ನಲ್ಲಿರುವ ವಡಲೂರು ಶ್ರೀಜ್ಯೋತಿ ರಾಮಲಿಂಗಾಸ್ವಾಮಿ ಸಮರಸ ಸನ್ಮಾರ್ಗ ಸಂಘದಲ್ಲಿ ಕುವೆಂಪು ವಾರ್ಡ್ ಬಿಜೆಪಿ ವತಿಯಿಂದ ಪ್ರತಿಭಾ ಪುರಸ್ಕಾರ ಮತ್ತು ವಿದ್ಯಾರ್ಥಿ ವೇತನ ವಿತರಣಾ ಸಮಾರಂಭ.ಬಿಜೆಪಿ ಮುಖಂಡರಾದ ಸಿ.ಎನ್.ಸತೀಶ್ ರವರು, ನಿಕಟಟಪೂರ್ವ ಬಿಬಿಎಂಪಿ ಸದಸ್ಯರಾದ ಹೆಚ್.ಮಂಜುನಾಥ್ ರವರು 200ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ವಿದ್ಯಾರ್ಥಿ ವೇತನವನ್ನು ವಿತರಿಸಿ ಸಾಧಕರಿಗೆ ಸನ್ಮಾನ ನೇರವೇರಿಸಿದರು. ಬಿಜೆಪಿ ಮುಖಂಡ ಸಿ.ಎನ್. ಸತೀಶ್ ರವರು ಮಾತನಾಡಿ ಕುವೆಂಪು ವಾರ್ಡ್ ನಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗುರುತಿಸಿ ಸನ್ಮಾನ, ಗೌರವ ನೀಡಲಾಗುತ್ತಿದೆ.ವಿದ್ಯೆ ಏನ್ನುವುದು ಬಹಳ ಮಹತ್ವ, ಹಣ ಇರಬಹುದು ವಿದ್ಯೆ ಇಲ್ಲದಿದ್ದರೆ ವ್ಯರ್ಥ ಅದ್ದರಿಂದ ಶಿಕ್ಷಣ ಮುಖ್ಯ. ಮಲ್ಲೇಶ್ವರನಲ್ಲಿ ಸರ್ಕಾರಿ ಮತ್ತು ಪಾಲಿಕೆ ಶಾಲೆಗಳನ್ನು ಡಾ.ಸಿ.ಎನ್.ಅಶ್ವಥ್ ನಾರಾಯಣ್‌ರವರ ಮಾರ್ಗದರ್ಶನ, ನೇತೃತ್ವದಲ್ಲಿ ಉನ್ನತೀಕರಣ ಮಾಡಲಾಗಿದೆ.ವಿದ್ಯೆ ಎಂಬುದು ಸಾಮಾನ್ಯ ವ್ಯಕ್ತಿ ದೊಡ್ಡ ಸ್ಥಾನ ತೆಗೆದುಕೊಂಡು ಹೋಗುತ್ತದೆ. ಸರ್.ಎಂ.ವಿಶ್ವೇಶ್ವರಯ್ಯರವರು ದೀಪ ಬೆಳಕಿನಲ್ಲಿ ಓದಿ ವಿಶ್ವಮಾನ್ಯಗಳಿಸಿದರು. ಅಬ್ದುಲ್ ಕಲಾಂ ಕಿಟಕಿಯಿಂದ ಅಚೆ ನಿಂತು ಕಲಿತು ದೇಶ ರಾಷ್ಟ್ರಪತಿಯಾಗಿ ಅಧಿಕಾರ ಮಾಡಿದರು ಇದೆಕ್ಕಲ್ಲ ಕಾರಣ ಶಿಕ್ಷಣ. ಮಕ್ಕಳಿಗೆ ಶಿಕ್ಷಣ ಜೊತೆಯಲ್ಲಿ ಮಾನವೀಯ ಮೌಲ್ಯ, ಸಂಸ್ಕಾರ, ಸಂಸ್ಕೃತಿ, ಸಂಪ್ರದಾಯ , ಉತ್ತಮ ಆಹಾರ ಪದ್ಧತಿ ಕುರಿತು ಅರಿವು ಮೂಡಿಸಬೇಕು ಎಂದು ಹೇಳಿದರು. ಹೆಚ್.ಮಂಜುನಾಥ್ ರವರು ಮಾತನಾಡಿ ದುಡ್ಡು ದೊಡ್ಡಪ್ಪ ವಿದ್ಯೆ ಅವರಪ್ಪ ಎಂಬ ಗಾದೆ ಮಾತಿನಂತೆ ಓದು ಬಹಳ ಮುಖ್ಯ. ಮಕ್ಕಳ ಶಿಕ್ಷಣಕ್ಕೆ ಪ್ರೋತ್ಸಾಹ, ಸಹಕಾರ ನೀಡಬೇಕು ಎಂದು 200ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ವಿತರಿಸಲಾಗುತ್ತಿದೆ. ಮಾಜಿ ಉಪಮುಖ್ಯಮಂತ್ರಿಗಳು, ಶಾಸಕರಾದ ಡಾ.ಸಿ.ಎನ್.ಅಶ್ವಥ್ ನಾರಾಯಣ್ ರವರು ಸ್ವಚ್ಛ, ಸುಂದರ ಮತ್ತು ಆರೋಗ್ಯಯುತ ಮಲ್ಲೇಶ್ವರ ವಿಧಾನಸಭಾ ಕ್ಷೇತ್ರ ನಿರ್ಮಾಣ ಮಾಡಿದ್ದಾರೆ.ನಾನು ಸಹ ಬ್ರಾಹ್ಮಣ ಕುಟುಂಬದ ಮನೆಯಲ್ಲಿ ವಾರನ್ನ ಊಟ ಮಾಡಿ ಶಿಕ್ಷಣ ಪಡೆದೆ. ಶಿಕ್ಷಣ ಮಹತ್ವಏನು ಎಂಬುದು ಅರಿವು ನನಗೆ ಇದೆ ಆದ್ದರಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.ಉತ್ತಮ ಅಂಕಗಳಿಸಿದೆ ವಿದ್ಯಾರ್ಥಿ ಬೆನ್ನುತಟ್ಟುವ ಕೆಲಸ ಮಾಡುತ್ತಿದ್ದೇವೆ. ಇಂದಿನ ಮಕ್ಕಳೇ ಭವ್ಯ ಭಾರತದ ಉಜ್ವಲ ತಾರೆಗಳು ಎಂದು ಹೇಳಿದರು. ಜಿಜೆಪಿ ಮುಖಂಡರುಗಳಾದ ಜೆ.ಕೆ.ಮಂಜು,ಸುರೇಶ್ ವಿನುತಾ ಶಿಲ್ಪರಾಣಿರವರು ಭಾಗವಹಿಸಿದ್ದರು.

## ಮುಂದಿನ ದಿನಗಳಲ್ಲಿ ಗ್ರಾಮ ಗ್ರಾಮಕ್ಕೂ ಯೋಗಾಭ್ಯಾಸ ವಿಸ್ತರಣೆ, ಯೋಗ ಗುರುಗಳ ನೇಮಕ: ಆರೋಗ್ಯ ಸಚಿವ ಯು ಟಿ ಖಾದರ್-

• ಉದಯವಾಹಿನಿ, ಬೆಂಗಳೂರು

ಆರೋಗ್ಯಕರವಾದ ಸಮಾಜದ ನಿರ್ಮಾಣಕ್ಕೆ ಯೋಗಾಭ್ಯಾಸ ಮಾಡುವುದು ಅತ್ಯಂತ ಅಗತ್ಯ ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ಹೇಳಿದರು.

ರಾಜ್ಯದ ಆಡಳಿತ ಶಕ್ತಿಕೇಂದ್ರ ವಿಧಾನಸೌಧ ಮುಂದೆ ಸರ್ಕಾರದ ಆಯುಷ್ ಇಲಾಖೆ ವತಿಯಿಂದ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಎಂಬ ಘೋಷವಾಕ್ಯದಡಿ ವಿಧಾನಸೌಧದ ಮೆಟ್ಟಿಲುಗಳ ಮೇಲೆ 12ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಯೋಗ ಅಗತ್ಯವಾಗಿದ್ದು, ನಾವು ಮಾತ್ರವಲ್ಲ ಎಲ್ಲರೂ ಯೋಗವನ್ನು ತಮ್ಮ ದಿನಚರಿಯಲ್ಲಿ ಅಳವಡಿಸಿಕೊಂಡಾಗ ಆರೋಗ್ಯವಂತ ಸಮಾಜ ನಿರ್ಮಾಣ ಮಾಡಲು ಸಾಧ್ಯ.

ಯೋಗ ನಮ್ಮ ದೇಶ ಮಾತ್ರವಲ್ಲ ವಿದೇಶಕ್ಕೂ ಹಬ್ಬಿದೆ. ಯೋಗ ಒಂದು ದಿನಕ್ಕೆ ಮಾತ್ರ ಸೀಮಿತವಾಗಿರದೆ, ಪ್ರತಿದಿನವೂ ಯೋಗದಿನವಾಗಬೇಕು ಎಂದರು.

ನಾವು ಮುಂದಿನ ಪೀಳಿಗೆಗೆ ಯೋಗ ಮಾಡುವುದನ್ನು ವರ್ಗಾಯಿಸಬೇಕು.

ಗ್ರಾಮ ಗ್ರಾಮಕ್ಕೂ ಯೋಗ ವಿಸ್ತರಿಸುತ್ತೇವೆ. ಈಗಾಗಲೇ ಹಲವು ಗ್ರಾಮದಲ್ಲಿ ಯೋಗ ಗುರುಗಳಿದ್ದಾರೆ. ಇದನ್ನು ಎಲ್ಲಾ ಜಿಲ್ಲೆಗಳಿಗೆ ವಿಸ್ತರಿಸಬೇಕಿದೆ. ಸಿಎಂ ಮುಂಬೈಯಲ್ಲಿದ್ದಾರೆ. ಡಿಸಿಎಂಗೆ ಅನಾರೋಗ್ಯ ಅದಕ್ಕೆ ಕಾರ್ಯಕ್ರಮಕ್ಕೆ ಬಂದಿಲ್ಲ.

ಸಾವಿರಾರು ಜನ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ. ಈ ಮೂಲಕ ರಾಜ್ಯಕ್ಕೆ ಉತ್ತಮ ಸಂದೇಶ ನೀಡಿದ್ದಾರೆ ಎಂದು ಸಚಿವ ಖಾದರ್ ತಿಳಿಸಿದರು.


ಉದಯವಾಹಿನಿ ಚಿತ್ರ

> ಯೋಗ, ಸಾವಿರಾರು ವರ್ಷಗಳ ಪುರಾತನವಾದದ್ದು, ಮಾನವನ ಆರೋಗ್ಯಕ್ಕೆ ಮಾರ್ಗ ತೋರಿಸಿದ್ದು ಯೋಗ. ಮನಸ್ಸು, ಶರೀರದ ಏಕತೆಗೆ ಯೋಗ ಮುಖ್ಯ. ಇಂದು ಜಗತ್ತು ಸ್ಪರ್ಧೆಗೆ ಬಿದ್ದಿದೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್

## ಆರ್‌ಎಸ್‌ಎಸ್ ಭದ್ರತೆ ನೀಡುವ ನಮಗೆ, ಅದರ ವಿವರ ತಿಳಿಯುವ ಹಕ್ಕಿದೆ: ಸಚಿವ ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ರಾಜ್ಯ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು ಆರ್‌ಎಸ್‌ಎಸ್ (ರಾಷ್ಟ್ರೀಯ ಸ್ವಯಂಸೇವಕ ಸಂಘ) ಚಟುವಟಿಕೆಗಳ ಕುರಿತು ಪಾರದರ್ಶಕತೆ ಕಾಪಾಡುವ ನಿಟ್ಟಿನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಧ್ಯಪ್ರವೇಶಿಸಬೇಕು ಎಂದು ಆಗ್ರಹಿಸಿದ್ದಾರೆ.

ಕೆಲ ದಿನಗಳ ಹಿಂದೆ ತಾವು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಸಂಘದ ನೋಂದಣಿ ಮತ್ತು ಚಟುವಟಿಕೆಗಳ ಕುರಿತು ಮಾಹಿತಿ ಕೇಳಿ ಪತ್ರ ಬರೆದಿದ್ದನ್ನು ಸಮರ್ಥಿಸಿಕೊಂಡ ಅವರು, ರಾಷ್ಟ್ರದ ಹಿತದೃಷ್ಟಿಯಿಂದ ಸಂಘವು ತನ್ನ ಕಾರ್ಯವೈಖರಿಯ ಬಗ್ಗೆ ವಿವರ ನೀಡಬೇಕು ಎಂದು ಹೇಳಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಈಗಾಗಲೇ ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಪತ್ರ ಬರೆದಿದ್ದೇನೆ. ಅವರು ಉತ್ತರ ನೀಡಲಿ. ಇದು 100 ವರ್ಷಗಳ ಇತಿಹಾಸ ಹೊಂದಿರುವ ಸಂಘಟನೆಯ ನೋಂದಣಿ ದಾಖಲೆಗಳು ಕಳೆದುಹೋಗಿವೆಯೇ ಎಂದು ವ್ಯಂಗ್ಯವಾಡಿದ್ದಾರೆ. ದೇಶಾದ್ಯಂತ ಆರ್‌ಎಸ್‌ಎಸ್ ಸಾವಿರಾರು ಶಾಖೆಗಳನ್ನು ನಡೆಸುತ್ತಿದೆ. ಆ ಶಾಖೆಗಳ ಸಂಖ್ಯೆ ಎಷ್ಟು, ಅವುಗಳನ್ನು ಯಾರು ನಿರ್ವಹಿಸುತ್ತಿದ್ದಾರೆ, ಅವುಗಳಿಗೆ ಹಣ ಎಲ್ಲಿಂದ ಬರುತ್ತದೆ ಹಾಗೂ ಹೇಗೆ ಬಳಸಲಾಗುತ್ತಿದೆ ಎಂಬ ಮಾಹಿತಿಯನ್ನು ಸಾರ್ವಜನಿಕವಾಗಿ ನೀಡಬೇಕು ಎಂದು ಒತ್ತಾಯಿಸಿದರು. ದೇಶದ ಹಿತದೃಷ್ಟಿಯಿಂದ ಮತ್ತು ಸಂಘದ ಕಾರ್ಯವೈಖರಿಯಲ್ಲಿ ಪಾರದರ್ಶಕತೆ ಇರಬೇಕಾದರೆ, ಶಾಖೆಗಳ ಸಂಖ್ಯೆ, ಅವುಗಳ ನಿರ್ವಹಣೆ ಹಾಗೂ ನಿಧಿಗಳ ಬಗ್ಗೆ ಸಂಪೂರ್ಣ ವರದಿ ನೀಡಬೇಕು ಎಂದು ಹೇಳಿದರು.


ಉದಯವಾಹಿನಿ ಚಿತ್ರ

## ನಟ ಪ್ರಕಾಶ್ ರಾಜ್ ವಿರುದ್ಧ ಅರೆಸ್ಟ್ ವಾರೆಂಟ್ ಜಾರಿ: ಯಾವುದೇ ಕ್ಷಣದಲ್ಲಿ ಬಂಧನ ಸಾಧ್ಯತೆ

• ಉದಯವಾಹಿನಿ, ಬೆಂಗಳೂರು

ನಟ ಪ್ರಕಾಶ್‌ರಾಜ್ ಅವರು ಹಲವು ರಾಜ್ಯಗಳಲ್ಲಿ ಮತದಾರರ ಗುರುತು ಪತ್ರ ಪಡೆದಿದ್ದಾರೆ ಎಂಬ ಆರೋಪದ ಹಿನ್ನೆಲ್ಲೆ ಕಾನೂನು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಬೆಂಗಳೂರು ನ್ಯಾಯಾಲಯವು ಅವರ ವಿರುದ್ಧ ಜಾಮೀನು ರಹಿತ ಬಂಧನ ವಾರಂಟ್ ಹೊರಡಿಸಿದೆ. ವಾರಂಟ್‌ನ್ನು ಬೆಂಗಳೂರಿನ 48ನೇ ಹೆಚ್ಚುವರಿ ಮುಖ್ಯ ಮಹಾನಗರ ದಂಡಾಧಿಕಾರಿ ನ್ಯಾಯಾಲಯ ಹೊರಡಿಸಿದೆ. ಪ್ರಕರಣವು ದಿಲೀಪ್ ಕುಮಾರ್ ಎಂಬ ವ್ಯಕ್ತಿಯು ಸಲ್ಲಿಸಿದ ದೂರಿನ ಆಧಾರದ ಮೇಲೆ ದಾಖಲಾಗಿದೆ.

ದೂರಿನ ಪ್ರಕಾರ, ಪ್ರಕಾಶ್ ರಾಜ್ ಅವರು ಒಂದೇ ಹೆಸರಿನಲ್ಲಿ ನಾಲ್ಕು ರಾಜ್ಯಗಳಲ್ಲಿ ಮತದಾರರ ಗುರುತಿನ ಚೀಟಿಗಳನ್ನು ಹೊಂದಿದ್ದಾರೆ ಎಂದು ಆರೋಪಿಸಿದ್ದಾರೆ. ಪ್ರಕಾಶ್‌ರಾಜ್ ಅವರು ಕರ್ನಾಟಕ, ಆಂಧ್ರಪ್ರದೇಶ, ತೆಲಂಗಾಣ ಮತ್ತು ತಮಿಳುನಾಡು ರಾಜ್ಯಗಳಲ್ಲಿ ಮತದಾರರ ಗುರುತಿನ ಚೀಟಿಗಳನ್ನು ಪಡೆದಿದ್ದಾರೆ .

ಒಬ್ಬ ವ್ಯಕ್ತಿಗೆ ಕೇವಲ ಒಂದು ಮಾನ್ಯ ಮತದಾರರ ಗುರುತಿನ ಚೀಟಿ ಅವಕಾಶವಿದೆ .

# ಬಿಡದಿ ಟೌನ್‌ಶಿಪ್ ವಿರುದ್ಧ ಜೆಡಿಎಸ್ ಸಮರ

• ಉದಯವಾಹಿನಿ, ಬೆಂಗಳೂರು

ವಿರಾಜ್ಯ ಸರ್ಕಾರದ ಗ್ರೇಟರ್ ಬೆಂಗಳೂರು ಇಂಟಿಗ್ರೇಟೆಡ್ ಟೌನ್ ಶಿಪ್ ಯೋಜನೆ ವಿರೋಧಿಸಿ ಜೆಡಿಎಸ್ ಇಂದು ಬಿಡದಿ ಭಾಗದಲ್ಲಿ ಬೃಹತ್ ಹೋರಾಟ ನಡೆಸಿತ್ತು, ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನೇತೃತ್ವದಲ್ಲಿ ರೈತರ ಪಾದಯಾತ್ರೆಗೆ ಚಾಲನೆ ನೀಡಲಾಯಿತು.

ಅಂಚಿಪುರ ಗ್ರಾಮದಿಂದ ಆರಂಭವಾದ ಪಾದಯಾತ್ರೆ ಅಂಚಿಪುರ ಕಾಲೊನಿ, ಬನ್ನಿಗಿರಿ, ಮರೇವೇಗೌಡನದೊಡ್ಡಿ, ಗುಂಡುತೋಪು, ಗೊಲ್ಲಹಳ್ಳಿ, ಕೋಡಿಪಾಳ್ಯ ಹಾಗೂ ಹೊಸೂರುವರೆಗೆ ಸಾಗಲಿದ್ದು, ಹೊಸೂರಿನಲ್ಲಿ ಬಹಿರಂಗ ಸಭೆಯೊಂದಿಗೆ ಸಮಾರೋಪಗೊಂಡಿತ್ತು. ಪಾದಯಾತ್ರೆಗೂ ಮುನ್ನ ರೈತರನ್ನುದ್ದೇಶಿಸಿ ಮಾತನಾಡಿದ ನಿಖಿಲ್ ಕುಮಾರಸ್ವಾಮಿ, ಸರ್ಕಾರ ಈಗಾಗಲೇ ಒಂದು ಹಂತದ ಅಂತಿಮ ಅಧಿಸೂಚನೆ ಹೊರಡಿಸಿದ್ದು, ರೈತರ ಮೇಲೆ ಒತ್ತಡ ಹೇರುವ ಪ್ರಯತ್ನ ನಡೆಯುತ್ತಿದೆ ಎಂದು ಆರೋಪಿಸಿದರು.

ರೈತರ ಒಗ್ಗಟ್ಟು ಮುರಿಯಲು ದಲ್ಲಾಳಿಗಳನ್ನು ಬಳಸಲಾಗುತ್ತಿದೆ. ಇದಕ್ಕೆ ಯಾರ ಕುಮ್ಮಕ್ಕಿದೆ ಎಂಬುದು ನಮಗೆ ಗೊತ್ತಿದೆ, ಎಂದು ಅವರು ಹೇಳಿದರು. ಯೋಜನೆಗಾಗಿ ಸುಮಾರು 500 ರಿಂದ 518 ಎಕರೆ ಕೃಷಿ ಭೂಮಿ ಸ್ವಾಧೀನಕ್ಕೆ ಸರ್ಕಾರ ಮುಂದಾಗಿದ್ದು, ಇದರಿಂದ


ಉದಯವಾಹಿನಿ ಚಿತ್ರ

26 ಗ್ರಾಮಗಳ 755 ರೈತ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಲಿವೆ ಎಂದು ಜೆಡಿಎಸ್ ಆರೋಪಿಸಿದೆ. ಭೂಮಿ ಕಳೆದುಕೊಳ್ಳುವವರಲ್ಲಿ ಶೇ.82ರಷ್ಟು ಸಣ್ಣ ಹಾಗೂ ಅತಿ ಸಣ್ಣ ರೈತರು ಇದ್ದಾರೆ. ದಲಿತ ಹಾಗೂ ಹಿಂದುಳಿದ ವರ್ಗದ ರೈತರಿಗೆ ಹೆಚ್ಚಿನ ಹೊಡೆತ ಬೀಳಲಿದೆ ಎಂದು ಪಕ್ಷ ವಾದಿಸಿದೆ.

ರೈತರ ಅನುಮತಿ ಪಡೆಯದೇ ಭೂಸ್ವಾಧೀನ ಪ್ರಕ್ರಿಯೆ ನಡೆಸಲಾಗುತ್ತಿದ್ದು, 2013ರ ಭೂಸ್ವಾಧೀನ, ಪುನರ್ವಸತಿ ಮತ್ತು ಪರಿಹಾರ ಕಾಯ್ದೆಯ ಉಲ್ಲಂಘನೆಯಾಗಿದೆ ಎಂದು ನಿಖಿಲ್ ಕುಮಾರಸ್ವಾಮಿ ಆರೋಪಿಸಿದರು. ಸರ್ಕಾರಕ್ಕೆ ಸವಾಲ್ ಹಾಕಿದ ಅವರು, ''ರೆಡ್ ಝೋನ್ ಎಂದು ಘೋಷಿಸಿರುವ ಪ್ರದೇಶವನ್ನು ಡಿನೋಟಿಫೈ ಮಾಡಲು ಸರ್ಕಾರಕ್ಕೆ ಸಾಧ್ಯವಾಗದಿದ್ದರೆ ಹೇಳಲಿ. ನಾವು ಅಧಿಕಾರಕ್ಕೆ ಬಂದ ಬಳಿಕ ಅದನ್ನು ಮಾಡುತ್ತೇವೆ,'' ಎಂದರು. ಇದೇ ವೇಳೆ, ಯೋಜನೆಗೆ ಬಿಜೆಪಿ ಬೆಂಬಲ ವ್ಯಕ್ತಪಡಿಸಿದ್ದು, ರೈತರ ಹೋರಾಟಕ್ಕೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಸೇರಿದಂತೆ ಬಿಜೆಪಿ ಮುಖಂಡರು ಸಹ ಬೆಂಬಲ ಸೂಚಿಸಿದ್ದಾರೆ. ಇತ್ತ ಸರ್ಕಾರ ಮಾತ್ರ, ಬಿಡದಿ ಟೌನ್‌ಶಿಪ್ ಯೋಜನೆ ಭವಿಷ್ಯದ ಎಐ ಸಿಟಿ ಹಾಗೂ ಉಪನಗರ ಅಭಿವೃದ್ಧಿಗೆ ಮಹತ್ವದ್ದಾಗಿದ್ದು, ಬಹುತೇಕ ರೈತರ ಒಪ್ಪಿಗೆಯೊಂದಿಗೆ ಯೋಜನೆ ಜಾರಿಯಾಗುತ್ತಿದೆ ಎಂದು ಸಮರ್ಥಿಸಿಕೊಂಡಿದೆ.ಬಿಡದಿ ಟೌನ್‌ಶಿಪ್ ವಿವಾದ ಈಗ ಅಭಿವೃದ್ಧಿ ಯೋಜನೆಯ ಮಿತಿಯನ್ನು ಮೀರಿ, ರಾಜ್ಯ ರಾಜಕೀಯದ ಪ್ರಮುಖ ಸಂಘರ್ಷವಾಗಿ ರೂಪುಗೊಂಡಿದ್ದು, ಮುಂದಿನ ದಿನಗಳಲ್ಲಿ ರೈತರ ಹೋರಾಟ ಯಾವ ತಿರುವು ಪಡೆಯಲಿದೆ ಎಂಬುದು ಕುತೂಹಲ ಮೂಡಿಸಿದೆ

### ರೈತರ ಮುಂದೆ ಬಹಿರಂಗಪಡಿಸಿ

ನಮ್ಮ ಕುಟುಂಬದ ಹೆಸರಲ್ಲಿ ಇರುವ ಆಸ್ತಿಯನ್ನೇ ರೈತರು ಹಾಗೂ ಸಾರ್ವಜನಿಕರ ಉದ್ದೇಶಕ್ಕಾಗಿ ಆಸ್ಪತ್ರೆ ಅಥವಾ ವೃದ್ಧಾಶ್ರಮ ನಿರ್ಮಾಣಕ್ಕೆ ನೀಡಲು ಸಿದ್ಧ. ಆದರೆ ಸರ್ಕಾರ ಈ ಭೂಸ್ವಾಧೀನವನ್ನು ಕೈಬಿಡಬೇಕು. ಯೋಜನೆಯ ತಾಂತ್ರಿಕ ಮಾಹಿತಿಯನ್ನು ರೈತರ ಮುಂದೆ ಬಹಿರಂಗಪಡಿಸಬೇಕು ಎಂದು ಆಗ್ರಹಿಸಿದರು.

> ''ಅನಿತಾ ಕುಮಾರಸ್ವಾಮಿ ಹೆಸರಲ್ಲಿ 27 ಎಕರೆ ಹಾಗೂ ನನ್ನ ಹೆಸರಲ್ಲಿ 5 ಎಕರೆ ಜಮೀನನ್ನು ಕೋವಿಡ್ ಅವಧಿಯಲ್ಲಿ ಖರೀದಿಸಲಾಗಿದೆ. ಹೈನುಗಾರಿಕೆ ಆಧಾರಿತ ಹಾಲು ಸಂಸ್ಕರಣಾ ಘಟಕ ಸ್ಥಾಪನೆ ಉದ್ದೇಶದಿಂದ ಮಾತ್ರ ಜಮೀನು ಖರೀದಿಸಿದ್ದು, ಬೇರೆ ಯಾವುದೇ ಉದ್ದೇಶ ಇಲ್ಲ,'' ಎಂದು ಸ್ಪಷ್ಟಪಡಿಸಿದರು.
> –ನಿಖಿಲ್ ಕುಮಾರಸ್ವಾಮಿ

### ಸರ್ಕಾರಕ್ಕೆ ನಿಖಿಲ್ ಸವಾಲ್

ಯೋಜನೆಯಿಂದ ಈ ಭಾಗದ ಹೈನುಗಾರಿಕೆ ಹಾಗೂ ರೇಷ್ಮೆ ಕೃಷಿಗೆ ತೀವ್ರ ಹೊಡೆತ ಬೀಳಲಿದೆ. ಈ ಯೋಜನೆ ಯಾರ ಅನುಕೂಲಕ್ಕಾಗಿ ಯಾರಿಗೆ ಲಾಭ ಮಾಡಿಕೊಡಲು ಹೊರಟದ್ದೀರಿ ಇದರಲ್ಲಿ ನಿಮ್ಮ ಪರ್ಸಂಟೇಜ್ ಎಷ್ಟು ಎಂದು ಸರ್ಕಾರವನ್ನು ಪ್ರಶ್ನಿಸಿದರು.



## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ದೈಹಿಕ ಲಾಭಕ್ಕಾಗಿ ವಿಶೇಷವಾಗಿ ಮಾನಸಿಕ ದೃಢತೆಗಾಗಿ ಧ್ಯಾನ ಯೋಗ ಪ್ರಾರಂಭಿಸಿ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ಆರ್ಥಿಕ ತೊಂದರೆಗೊಳಗಾಗಬಹುದು. ಆದಾಗ್ಯೂ ಈ ಸಮಯದಲ್ಲಿ ಹಣಕ್ಕಿಂತ ಹೆಚ್ಚಾಗಿ ಅವರ ಆರೋಗ್ಯದ ಬಗ್ಗೆ ಕಾಳಜಿ ವಹಿಸಬೇಕು.

**ವೃಷಭ** ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ನಿಮ್ಮ ಕುಟುಂಬದ ಕಲ್ಯಾಣಕ್ಕಾಗಿ ಕೆಲಸ ಮಾಡಿ. ನಿಮ್ಮ ಕಾರ್ಯಗಳು ದುರಾಶೆಯಿಂದಲ್ಲದೆ ಪ್ರೀತಿ ಮತ್ತು ಸಕಾರಾತ್ಮಕ ದೃಷ್ಟಿಯಿಂದ ನಡೆಯಬೇಕು.

**ಮಿಥುನ** ನೀವು ಸಂದಿಗ್ಧ ಪರಿಸ್ಥಿತಿಯನ್ನು ಎದುರಿಸಿದಲ್ಲಿ ಖಿನ್ನತೆಗೊಳಗಾಗಬೇಡಿ. ಆಹಾರದ ಸ್ವಾದಕ್ಕೆ ಉಪ್ಪು ಬೇಕಾದ ಹಾಗೆ ಅತೃಪ್ತಿಯಿಂದ ಮಾತ್ರ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ನಿಮ್ಮ ವ್ಯಸ್ತ ದಿನಚರಿಯನ್ನು ಬದಲಾಯಿಸಲು ಕೆಲವು ಸಾಮಾಜಿಕ ಸಮಾರಂಭಗಳಿಗೆ ಹಾಜರಾಗಿ.

**ಕರ್ಕಾಟಕ** ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ. ಇಂದು ನಿಮ್ಮ ಸಹೋದರ ಸಹೋದರಿಯರು ನಿಮ್ಮಿಂದ ಆರ್ಥಿಕ ಬೆಂಬಲವನ್ನು ಕೇಳಬಹುದು.

**ಸಿಂಹ** ನೀವು ಒಂದು ಹೊಸ ಉದ್ಯಮವನ್ನು ಆರಂಭಿಸುವ ಆಲೋಚನೆ ಹೊಂದಿದ್ದಲ್ಲಿ? ಶೀಘ್ರ ನಿರ್ಧಾರಗಳನ್ನು ಕೈಗೊಳ್ಳಿ – ನಕ್ಷತ್ರಗಳು ನಿಮಗೆ ಅನುಕೂಲಕರವಾಗಿರುವಂತೆ ತೋರುತ್ತವೆ – ನೀವು ಬಯಸಿದ್ದನ್ನು ಮಾಡಲು ಹಿಂಜರಿಯದಿರಿ. ನಿಮ್ಮ ಹತ್ತಿರ ಸಮಯ ಉಳಿದಿರುತ್ತದೆ.

**ಕನ್ಯಾ** ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ಚಂದ್ರನ ಸ್ಥಾನದಿಂದಾಗಿ, ಇಂದು ನಿಮ್ಮ ಹಣವನ್ನು ಅನಗತ್ಯ ಕೆಲಸಗಳಿಗೆ ಖರ್ಚು ಮಾಡಬಹುದು.

**ತುಲಾ** ಕಿಕ್ಕಿರಿದ ಬಸ್‌ನಲ್ಲಿ ಪ್ರಯಾಣಿಸುವಾಗ ರಕ್ತದೊತ್ತಡವಿರುವ ರೋಗಿಗಳು ಅವರ ಆರೋಗ್ಯದ ಬಗ್ಗೆ ಹೆಚ್ಚು ಎಚ್ಚರಿಕೆ ವಹಿಸಬೇಕು. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ.

**ವೃಶ್ಚಿಕ** ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು.

**ಧನಸ್ಸು** ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಚಂದ್ರನ ಸ್ಥಾನದಿಂದಾಗಿ, ಇಂದು ನಿಮ್ಮ ಹಣವನ್ನು ಅನಗತ್ಯ ಕೆಲಸಗಳಿಗೆ ಖರ್ಚು ಮಾಡಬಹುದು. ಯಾರಾದರೂ ನಿಮಗೆ ಪ್ರೇಮ ನಿವೇದನೆ ಮಾಡುವ ಸಾಧ್ಯತೆಗಳಿವೆ.

**ಮಕರ** ಸಂತೃಪ್ತಿಯ ಜೀವನಕ್ಕಾಗಿ ನಿಮ್ಮ ಮಾನಸಿಕ ದೃಢತೆಯನ್ನು ಸುಧಾರಿಸಿ. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯ ಕಾರಣದಿಂದ ತೊಂದರೆಗೊಳಗಾಗಬಹುದು. ಇದಕ್ಕಾಗಿ ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ನೀವೇನೇ ಮಾಡಿದರೂ ನೀವು ಅಧಿಕಾರಯುತ ಸ್ಥಾನದಲ್ಲಿರುತ್ತೀರಿ.

**ಕುಂಭ** ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಸಹೋದರ–ಸಹೋದರಿಯರ ಸಹಾಯದಿಂದ ಇಂದು ನೀವು ಆರ್ಥಿಕವಾಗಿ ಲಾಭವನ್ನು ಪಡೆಯಬಹುದು. ನಿಮ್ಮ ಸಹೋದರ ಸಹೋದರಿಯರ ಸಲಹೆ ತೆಗೆದುಕೊಳ್ಳಿ.

**ಮೀನ** ತೊಂದರೆಗಳ ಬಗ್ಗೆ ಚಿಂತಿಸುವ ಮತ್ತು ಅವುಗಳನ್ನು ದೊಡ್ಡದಾಗಿಸುವ ನಿಮ್ಮ ಸ್ವಭಾವ ನಿಮ್ಮ ನೈತಿಕತೆಯನ್ನು ದುರ್ಬಲಗೊಳಿಸಬಹುದು. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು.

# ಮತದಾರರ ಪಟ್ಟಿ ಪರಿಷ್ಕರಣೆಗೆ ಸಾರ್ವಜನಿಕರು –ರಾಜಕೀಯ ಪಕ್ಷಗಳ ಸಹಕಾರ ಅಗತ್ಯ : ಜಿಲ್ಲಾಧಿಕಾರಿ ಸುರೇಶ ಇಟ್ನಾಳ

• ಉದಯವಾಹಿನಿ ಕಾರಟಗಿ :

ಕನಕಗಿರಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026 ಕಾರ್ಯ ಜೂನ್ 30ರಿಂದ ಜುಲೈ 29ರವರೆಗೆ ಜಿಲ್ಲಾದ್ಯಂತ ನಡೆಯಲಿದೆ. ಈ ಪ್ರಕ್ರಿಯೆ ಯಶಸ್ವಿಯಾಗಲು ಎಲ್ಲಾ ರಾಜಕೀಯ ಪಕ್ಷಗಳು ಹಾಗೂ ಸಾರ್ವಜನಿಕರ ಸಹಕಾರ ಅಗತ್ಯ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಹೇಳಿದರು.ಆರ್.ಜಿ. ರಸ್ತೆಯ ಪದ್ಮಶ್ರೀ ಕನ್ವೆನ್ಷನ್ ಹಾಲ್‌ನಲ್ಲಿ ಕನಕಗಿರಿ ವಿಧಾನಸಭಾ ಕ್ಷೇತ್ರದ ಬೂತ್ ಲೆವೆಲ್ ಏಜೆಂಟ್ ಕಾರ್ಯಾಗಾರವನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

**ಮತದಾರರ ನೆರವು ಕೇಂದ್ರ**



ಉದಯವಾಹಿನಿ ಚಿತ್ರ

★ಪ್ರಮುಖ ಅಂಶಗಳು:★

**★ಪಾರದರ್ಶಕ ಪ್ರಕ್ರಿಯೆ:★** ಮತದಾರರು, ರಾಜಕೀಯ ಪಕ್ಷಗಳು ಮತ್ತು ಚುನಾವಣಾ ಸಿಬ್ಬಂದಿ ಒಳಗೊಂಡ ಪಾಲ್ಗೊಳ್ಳುವಿಕೆಯ ಪ್ರಕ್ರಿಯೆ ಇದಾಗಿದೆ ಎಂದರು.

**★ಮನೆ ಮನೆ ಭೇಟಿ:★** ಬೂತ್ ಮಟ್ಟದ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಎನ್ಯೂಮರೇಶನ್ ಅರ್ಜಿ ನೀಡುವರು. ಅರ್ಜಿ ಸಂಗ್ರಹಕ್ಕೆ ಕನಿಷ್ಠ ಮೂರು ಬಾರಿ ಭೇಟಿ ನೀಡಲಾಗುವುದು.

**★ದಾಖಲೆ ಅಗತ್ಯ:★** ಮತದಾರರು ಹಿಂದಿನ ಪಟ್ಟಿಯ ಆಧಾರದ ಮೇಲೆ ವಿವರ ಭರ್ತಿ ಮಾಡಿ, ಕೇಳಲಾದ ಯಾವುದಾದರೊಂದು ದಾಖಲೆಯೊಂದಿಗೆ ಸಲ್ಲಿಸಬೇಕು.

**★ನೆರವು ಕೇಂದ್ರ:★** ನಗರ ಹಾಗೂ ಗ್ರಾಮೀಣ ಪ್ರತಿ ಗ್ರಾಮ ಪಂಚಾಯತಿಗೂ ಒಂದು ಮತದಾರರ ನೆರವು ಕೇಂದ್ರ ತೆರೆಯಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕು ಎಂದು ಕೋರಿದರು.

ಕಾರ್ಯಾಗಾರದಲ್ಲಿ ವಿವಿಧ ಪಕ್ಷದ ಮುಖಂಡರು ಹಾಗೂ ಬಿಎಲ್‌ಎ ಎತ್ತಿದ ಎಸ್‌ಐಆರ್ ಸಂಬಂಧಿತ ಅನುಮಾನಗಳಿಗೆ ಜಿಲ್ಲಾಧಿಕಾರಿಗಳು ಸ್ಪಷ್ಟನೆ ನೀಡಿದರು.

ಈ ವೇಳೆ ತಹಸೀಲ್ದಾರ್ ಎಂ.ಕುಮಾರಸ್ವಾಮಿ, ಚಂದ್ರಶೇಖರ ಗಾಳಿ, ಕಾರ್ಯನಿರ್ವಾಹಕ ಅಧಿಕಾರಿಗಳಾದ ಲಕ್ಷ್ಮೀದೇವಿ ಯಾದವ್, ರಾಜಶೇಖರ ಕೆ., ಗ್ರೇಡ್– 2 ತಹಶೀಲ್ದಾರ್ ವಿಶ್ವೇಶ್ವರಯ್ಯ ಸಾಲಿಮಠ, ಸಿದ್ದಾಪುರ ಹೋಬಳಿಯ ಉಪ ತಹಶೀಲ್ದಾರ್ ಗಿರಿಸ್ವಾಮಿ, ಕಂದಾಯ ನಿರೀಕ್ಷರಾದ ಸಂಗಮ್ಮ ಹಿರೇಮಠ, ಶರಣಪ್ಪ, ಕಾರಟಗಿ ಪುರಸಭೆಯ ಅಧ್ಯಕ್ಷರಾದ ಮಂಜುನಾಥ್ ಮೆಗೂರು ಸೇರಿ ಜಿಲ್ಲಾ ಹಾಗೂ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಕೆಡಿಪಿ ಸದಸ್ಯರು, ವಿವಿಧ ಪಕ್ಷದ ರಾಜಕೀಯ ಮುಖಂಡರು, ಸೇರಿದಂತೆ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಬಿಎಲ್ ಎಗಳು, ಗಣಕಯಂತ್ರ ನಿರ್ವಾಹಕರು, ಇದ್ದರು.

# ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ಶೀಘ್ರ ನೇಮಕಾತಿ

## ಅಂಗನವಾಡಿ ಕೇಂದ್ರಗಳಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಬೇಕು. 170 ಅಂಗನವಾಡಿ ಕಟ್ಟಡಗಳು ಹೊಸದಾಗಿ ಮಂಜೂರಾಗಿವೆ

• ಉದಯವಾಹಿನಿ ಧಾರವಾಡ,

ಜಿಲ್ಲೆಯಲ್ಲಿ 1,622 ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ಶೀಘ್ರ ನೇಮಕಾತಿ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಸೂಚಿಸಿದರು.

1 : ಮಹಿಳೆಯರ ಮತ್ತು ಮಕ್ಕಳ ಮೇಲೆ ದೌರ್ಜನ್ಯ
2 : ಅಂಗನವಾಡಿ ಕೇಂದ್ರಗಳಲ್ಲಿ ಮೂಲ ಸೌಕರ್ಯ
3 : ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆ

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಮಾತನಾಡಿದರು. ಜಿಲ್ಲೆಯಲ್ಲಿರುವ 1,622 ಅಂಗನವಾಡಿ ಕೇಂದ್ರಗಳಲ್ಲಿ 1,571 ಅಂಗನವಾಡಿ ಕಾರ್ಯಕರ್ತೆಯರು ಕಾರ್ಯನಿರ್ವಹಿಸುತ್ತಿದ್ದು, 51 ಹುದ್ದೆಗಳು ಖಾಲಿಯಿವೆ.

1,251 ಅಂಗನವಾಡಿ ಸಹಾಯಕಿಯರು ಸೇವೆ ಸಲ್ಲಿಸುತ್ತಿದ್ದು, 371 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಬೇಕಿದೆ. ಅಂಗನವಾಡಿ ಕೇಂದ್ರಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ಶೀಘ್ರದಲ್ಲೇ ನೇಮಕ ಮಾಡಿಕೊಳ್ಳಬೇಕು. ಅಗಸ್ಟ್ ತಿಂಗಳೊಳಗೆ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕು ಎಂದು ಅವರು ಅಧಿಕಾರಿಗಳಿಗೆ ತಿಳಿಸಿದರು.

ಅಂಗನವಾಡಿ ಕೇಂದ್ರಗಳಲ್ಲಿ ಮೂಲ ಸೌಕರ್ಯಗಳನ್ನು ಒದಗಿಸಬೇಕು. 170 ಅಂಗನವಾಡಿ ಕಟ್ಟಡಗಳು ಹೊಸದಾಗಿ ಮಂಜೂರಾಗಿವೆ. ಅದರಲ್ಲಿ 111 ಕಟ್ಟಡಗಳು ಪೂರ್ಣಗೊಂಡಿದ್ದು, 27 ಕಟ್ಟಡಗಳ ಕಾಮಗಾರಿಗಳು ಪ್ರಗತಿಯಲ್ಲಿವೆ.

32 ಕಟ್ಟಡಗಳ ಕಾಮಗಾರಿಗಳು ನಡೆಯಬೇಕಿದೆ. ಮಕ್ಕಳಿಗೆ ಪೂರಕ ಪೌಷ್ಠಿಕ ಆಹಾರವನ್ನು ವಿತರಿಸಬೇಕು. ಮಾತೃಪೂರ್ಣ ಯೋಜನೆಯಡಿ ಗರ್ಭಿಣಿ ಮತ್ತು ಬಾಣಂತಿಯರಿಗೆ ಆಹಾರ ವಿತರಿಸಲು ಕ್ರಮ ವಹಿಸಬೇಕಾಗುತ್ತದೆ.

ಮಕ್ಕಳ ಆರೋಗ್ಯ ತಪಾಸಣೆಯನ್ನು ನಡೆಸಬೇಕು.ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಮುಂದಾಗಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಹಿಳೆಯರ ಮತ್ತು ಮಕ್ಕಳ ಮೇಲೆ ದೌರ್ಜನ್ಯಗಳು ನಡೆಯದಂತೆ ಗ್ರಾಮ ಪಂಚಾಯತ ಮಟ್ಟದಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು.

> ಧಾರವಾಡದಲ್ಲಿ ಕಾರ್ಯನಿರ್ವಹಿಸುತ್ತಿರುವ ದರ್ಶನ ಸಾಂತ್ವನ ಕೇಂದ್ರವು ಉಪ್ಪಿನ ಬೇಟಗೇರಿಯಲ್ಲಿ ಕಾರ್ಯನಿರ್ವಹಿಸಲು ಮುಂದಾಗಬೇಕು. ಕೇಂದ್ರದ ಮೂಲ ಉದ್ದೇಶಕ್ಕೆ ಅನುಗುಣವಾಗಿ ಕಾರ್ಯ ನಿರ್ವಹಣೆ ಮಾಡಬೇಕಿದೆ. ಆ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಸೂಚಿಸಿದರು.
> **ಜಿಲ್ಲಾಧಿಕಾರಿ ಸ್ನೇಹಲ್**


ಉದಯವಾಹಿನಿ ಚಿತ್ರ

### ಪೋಕ್ಸೋ ದೂರುಗಳ ಬಗ್ಗೆ ಹೆಚ್ಚಿನ ನಿಗಾ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಅಲ್ಲಪ್ಪ ಎಂ.ಬಡಿಗೇರ ಅವರು ಮಾತನಾಡಿ, ಪೋಕ್ಸೋ ದೂರುಗಳ ಬಗ್ಗೆ ಹೆಚ್ಚಿನ ನಿಗಾ ವಹಿಸಬೇಕು. ಮಹಿಳೆಯರ ಮೇಲೆ ದೌರ್ಜನ್ಯಗಳು ನಡೆಯದಂತೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಅವರು ತಿಳಿಸಿದರು.

> ಬಾಲ್ಯ ವಿವಾಹ ತಡೆಗೆ ಕ್ರಮಗಳನ್ನು ಕೈಗೊಳ್ಳಬೇಕು. ಹುಬ್ಬಳ್ಳಿಯ ರಾಜ್ಯ ಮಹಿಳಾ ನಿಲಯದಲ್ಲಿ ಖಾಲಿಯಿರುವ ಹುದ್ದೆಗಳನ್ನು ಹೊರಗುತ್ತಿಗೆ ಮೂಲಕ ಭರ್ತಿ ಮಾಡಿಕೊಳ್ಳಲು ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಅವರು ಅಧಿಕಾರಿಗಳಿಗೆ ತಿಳಿಸಿದರು.
> **ಜಿಲ್ಲಾಧಿಕಾರಿ ಸ್ನೇಹಲ್ ಆರ್.**

ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಗೆ ಹೆಚ್ಚಿನ ಒತ್ತು ನೀಡಬೇಕಿದೆ.

ಉದ್ಯೋಗಸ್ಥ ಮಹಿಳೆಯರ ವಸತಿ ನಿಲಯಗಳ ಕುರಿತು ವ್ಯಾಪಕ ಪ್ರಚಾರ ಮಾಡುವುದು ಅಗತ್ಯವಿದೆ. ಶಿಶುಪಾಲನಾ ಕೇಂದ್ರಗಳು ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸಬೇಕು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಅನುರಾಧಾ ವಸ್ತ್ರದ, ಡಿಎಚ್‌ಓ ಡಾ.ಪರಶುರಾಮ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ವೀರನಗೌಡ ಪಾಟೀಲ, ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ.ಕಮಲಾ ಬೈಲೂರು, ಡಿಡಿಪಿಐ ಉಮೇಶ ಬಮ್ಮಕ್ಕನವರ, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಕಾಶೀನಾಥ ಭದ್ರಣ್ಣವರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಉಪಸ್ಥಿತರಿದ್ದರು.

# ಕಾರಟಗಿಯಲ್ಲಿ ಅಂತರಾಷ್ಟ್ರೀಯ ಯೋಗ ದಿನಾಚರಣೆ

• ಉದಯವಾಹಿನಿ ಕಾರಟಗಿ :

ಅಂತರಾಷ್ಟ್ರೀಯ ಯೋಗ ದಿನದ ಅಂಗವಾಗಿ ಕಾರಟಗಿ ಪಟ್ಟಣದ ಶಾಂತಿನಿಕೇತನ ಪಬ್ಲಿಕ್ ಶಾಲೆಯಲ್ಲಿ 12ನೇ ಯೋಗ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಸಂಸ್ಥೆಯ ಕಾರ್ಯದರ್ಶಿ ಶ್ರೀಯುತ ಶರಣಯ್ಯ ಸ್ವಾಮಿ ಅವರು ಸಸಿಗೆ ನೀರೆರೆಯುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಮಾತನಾಡಿದ ಅವರು, ಯೋಗವು ಪ್ರತಿಯೊಬ್ಬರ ದೈಹಿಕ ಹಾಗೂ ಮಾನಸಿಕ ಸದೃಢತೆಗೆ ಸಹಾಯಕಾರಿಯಾಗಿದೆ. ವಿದ್ಯಾರ್ಥಿಗಳ ಓದಿನ ಜ್ಞಾಪಕ ಶಕ್ತಿಯನ್ನು ವೃದ್ಧಿಸಲು ಯೋಗವು ಬಹು ಮುಖ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಅಧ್ಯಕ್ಷ ಶ್ರೀಯುತ ಶರಣಪ್ಪ ಅಂಗಡಿ ಅವರು, ಯೋಗವನ್ನು ಜಗತ್ತಿಗೆ ನೀಡಿದ ಹೆಮ್ಮೆ ಭಾರತಕ್ಕೆ ಸಲ್ಲುತ್ತದೆ. ಇತ್ತೀಚಿನ ದಿನಗಳಲ್ಲಿ ಹೃದಯಾಘಾತದಂತಹ ಅಸಹಜ ಸಾವುಗಳು ಹೆಚ್ಚುತ್ತಿವೆ. ಇಂತಹ ಸಮಸ್ಯೆಗಳಿಗೆ ಯೋಗವೇ ಪರಿಹಾರ ಎಂದು ಹೇಳಿದರು. ಶಾಲೆಯ ಯೋಗ ಶಿಕ್ಷಕಿ ಶ್ರೀಮತಿ ಪೂರ್ಣಿಮಾ ಅವರ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ಮತ್ತು ಶಾಲಾ ಸಿಬ್ಬಂದಿ ವಿವಿಧ ಯೋಗಾಸನಗಳನ್ನು ಅಭ್ಯಾಸ ಮಾಡಿದರು. ಮಕ್ಕಳು ಯೋಗದ ಮಹತ್ವ ಕುರಿತು ಪ್ರಸ್ತುತಪಡಿಸಿದ ಕಿರು ನಾಟಕ ಮತ್ತು ನೃತ್ಯ ಪ್ರದರ್ಶನ ಎಲ್ಲರ ಗಮನ ಸೆಳೆಯಿತು.

ಕಾರ್ಯಕ್ರಮವನ್ನು ಶಿಕ್ಷಕಿಯರಾದ ಕುಮಾರಿ ಶರಣಮ್ಮ ಮತ್ತು ಭಾರತಿ ನಿರ್ವಹಿಸಿದರು. ಶ್ರೀಮತಿ ಅನಿತಾ ವಂದನಾರ್ಪಣೆ ಸಲ್ಲಿಸಿದರು.



ಉದಯವಾಹಿನಿ ಚಿತ್ರ

# ಆಝಾದ್ ನಗರದಲ್ಲಿ ಯುವಕ ಆತ್ಮಹತ್ಯೆ

• ಉದಯವಾಹಿನಿ, ಜಮಖಂಡಿ,

ನಗರದ ಆಝಾದ್ ನಗರದಲ್ಲಿ 30 ವರ್ಷದ ಯುವಕನೋರ್ವ ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಶುಕ್ರವಾರ ನಡೆದಿದೆ. ಮೃತನನ್ನು ಮಹೇಶ ಹವಾರಿ (30) ಎಂದು ಗುರುತಿಸಲಾಗಿದೆ. ಮಹೇಶ ಅವರು ಅವಿವಾಹಿತರಾಗಿದ್ದು, ಕಳೆದ ಹಲವು ವರ್ಷಗಳಿಂದ ಜಮಖಂಡಿ ಸರ್ಕಾರಿ ಆಸ್ಪತ್ರೆಯ ಮುಖ್ಯ ದ್ವಾರದ ಬಳಿ ಎಳೆನೀರು ಮಾರಾಟ ಮಾಡಿ ಜೀವನ ಸಾಗಿಸುತ್ತಿದ್ದರು ಎಂದು ತಿಳಿದು ಬಂದಿದೆ. ಶುಕ್ರವಾರ ಮನೆಯಲ್ಲಿ ನೇಣು ಬಿಗಿದುಕೊಂಡ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ವಿಷಯ ತಿಳಿಯುತ್ತಿದ್ದಂತೆ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಘಟನೆ ಸ್ಥಳಕ್ಕೆ ಜಮಖಂಡಿ ಶಹರ ಪೊಲೀಸ್ ಠಾಣೆಯ ಸಿಬ್ಬಂದಿಗಳಾದ ಮಲ್ಲು ಕೋಲಾರ, ಎಸ್.ಬಿ. ಹೊಸೂರ್ ಹಾಗೂ ಐ.ಜಿ. ದಾಶ್ಯಾಳ ಅವರ ನೇತೃತ್ವದ ಪೊಲೀಸ್ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದೆ.

ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ. ಈ ಕುರಿತು ಜಮಖಂಡಿ ಶಹರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಪ್ರತಿಭಾ ಪುರಸ್ಕಾರ ಪೂರ್ವಭಾವಿ ಸಭೆ

• ಉದಯವಾಹಿನಿ ಬಾದಾಮಿ

ಹಾಲುಮತ ನೌಕರರ ಸಂಘ, ಕರ್ನಾಟಕ ಪ್ರದೇಶ ಕುರುಬರ ಸಂಘ, ಶ್ರೀ ಬೀರಲಿಂಗೇಶ್ವರ ಸೇವಾ ಸಮಿತಿ, ನಿವೃತ್ತ ನೌಕರರ ಸಂಘ ಹಾಗೂ ಸಮಾಜದ ಎಲ್ಲಾ ಸಂಘಟನೆಗಳ ಸಹಯೋಗದೊಂದಿಗೆ ಜೂ.28 ರಂದು ಶ್ರೀ ಬೀರಲಿಂಗೇಶ್ವರ ಸಮುದಾಯ ಭವನದಲ್ಲಿ ಆಯೋಜಿಸಿರುವ ಹಾಲುಮತ ಸಮಾಜದ ಪ್ರತಿಭಾ ಪುರಸ್ಕಾರದ ನಿಮಿತ್ಯ ಪೂರ್ವಭಾವಿ ಸಭೆ ಬಾದಾಮಿಯ ಬೀರಲಿಂಗೇಶ್ವರ ಸಮುದಾಯ ಭವನದಲ್ಲಿ ಜರುಗಿತು. ಈ ಪೂರ್ವಭಾವಿ ಸಭೆಯಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಎಂ.ಬಿ.ದೊಡ್ಡಪ್ಪನ್ನವರ, ತಾಲ್ಲೂಕಾ ಸರಕಾರಿ ನೌಕರರ ಸಂಘದ ಅಧ್ಯಕ್ಷ ಡಾ.ಎಂ. ಎನ್.ಸಿದ್ಲಿಂಗಪ್ಪನವರ, ನಿವೃತ್ತ ನೌಕರ ವೈ.ವೈ.ದಳವಾಯಿ, ಹನಮಂತ ಅಪ್ಪನ್ನವರ, ಮಂಜುನಾಥ ಹೊಸಮನಿ, ಸೇರಿದಂತೆ ಸಮಾಜ ಬಾಂಧವರು ಹಾಗೂ ಸಮಾಜದ ನೌಕರರು ಸಭೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲು ತಮ್ಮ ಸಲಹೆ ಸೂಚನೆಗಳು ತಿಳಿಸಿದರು.

# ಆರೋಗ್ಯಯುತ ಜೀವನಕ್ಕಾಗಿ ಯೋಗ ಮಾಡಿ

• ಉದಯವಾಹಿನಿ ವಿಜಯಪುರ


ಉದಯವಾಹಿನಿ ಚಿತ್ರ

ಆರೋಗ್ಯಯುತ ಜೀವನ ರೂಪಿಸಿಕೊಳ್ಳಲು ಯೋಗವನ್ನು ಪ್ರತಿಯೊಬ್ಬರೂ ತಮ್ಮ ಬದುಕಿನ ದೈನಂದಿನ ಭಾಗವಾಗಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಅವರು ಕರೆ ನೀಡಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆಯುಷ್ ಇಲಾಖೆ ಇವರ ಸಹಯೋಗದಲ್ಲಿ ನಗರದ ಡಾ. ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಆರೋಗ್ಯಕರ ವೃದ್ಧಾಪ್ಯಕ್ಕಾಗಿ ಯೋಗ ಎಂಬ ಘೋಷವಾಕ್ಯದ 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮಕ್ಕೆ ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು. ಯೋಗವು ಜಗತ್ತಿಗೆ ನಮ್ಮ ದೇಶ ನೀಡಿರುವ ಅತ್ಯಂತ ಹೆಮ್ಮೆಯ ಕೊಡುಗೆಯಾಗಿದ್ದು, ಸಾವಿರಾರು ವರ್ಷಗಳ ಇತಿಹಾಸವನ್ನು ಹೊಂದಿದೆ.

ಇಂದಿನ ಆಧುನಿಕ ಜೀವನಶೈಲಿಯಲ್ಲಿ ಎದುರಾಗುತ್ತಿರುವ ಒತ್ತಡ, ಆತಂಕ ಹಾಗೂ ಮಾನಸಿಕ ಸಮಸ್ಯೆಗಳಿಗೆ ಯೋಗ ಸಂಜೀವಿನಿಯಾಗಿದೆ. ಮನಸ್ಸು ಮತ್ತು ದೇಹದ ಸದೃಢತೆಗೆ ಯೋಗವು ಬಹು ಮುಖ್ಯವಾಗಿದ್ದು, ಪ್ರತಿನಿತ್ಯ ನಿಯಮಿತವಾಗಿ ಯೋಗಾಭ್ಯಾಸ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ನಿರೋಗಿ ಹಾಗೂ ಸುಂದರ ಜೀವನ ನಡೆಸಲು ಸಾಧ್ಯ ಎಂದು ಅವರು ಆಶಯ ವ್ಯಕ್ತಪಡಿಸಿದರು. ಯೋಗವು ಪ್ರಪಂಚದಾದ್ಯಂತ ಅತ್ಯಂತ ಜನಪ್ರಿಯತೆಯನ್ನು ಗಳಿಸಿದ್ದು, ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಅತ್ಯಂತ ಪರಿಣಾಮಕಾರಿ ಸಾಧನವಾಗಿದೆ.

# ಭೀಕರ ಬಿರುಗಾಳಿ ಮಳೆ: 20ಕ್ಕೂ ಹೆಚ್ಚು ಮನೆಗಳಿಗೆ ಹಾನಿ, 10ಕ್ಕೂ ಹೆಚ್ಚು ವಿದ್ಯುತ್ ಕಂಬಗಳು ಉರುಳಿ, ಹಾರಿ ಹಲವರಿಗೆ ಗಾಯ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನ ತುಮಕುಂಟಾ ಗ್ರಾಮದಲ್ಲಿ ಶನಿವಾರ ಸಾಯಂಕಾಲ ಸುರಿದ ಭೀಕರ ಬಿರುಗಾಳಿ ಸಹಿತ ಮಳೆಯಿಂದ ವ್ಯಾಪಕ ಹಾನಿ ಸಂಭವಿಸಿ ಗ್ರಾಮದ ಸುಮಾರು 20ಕ್ಕೂ ಹೆಚ್ಚು ಮನೆಗಳು ಹಾನಿಗೊಳಗಾಗಿದ್ದು,ಚರ್ಚ್‌ನ ಮೇಲ್ಛಾವಣಿಯ ಪತ್ರಾಸ್‌ಗಳು ಸಂಪೂರ್ಣವಾಗಿ ಹಾರಿ ದೂರದ ಮನೆಗಳ ಮೇಲೆ ಬಿದ್ದ ಪರಿಣಾಮ ಚರ್ಚ್‌ಗೆ ಭಾರೀ ಹಾನಿಯಾಗಿದೆ.

ಘಟನೆಯ ವೇಳೆ ಸ್ಥಳದಲ್ಲಿದ್ದ ಯಂಕಪ್ಪ ಹಡಪದ ಅವರು ಕೈ–ಕಾಲುಗಳಿಗೆ ಗಂಭೀರ ಗಾಯಗೊಂಡಿದ್ದು,ಸಚಿನ್ ಜೋಗಿ ಎಂಬ ಯುವಕನ ಕಾಲಿಗೂ ಗಾಯವಾಗಿದೆ,ಗಾಯಾಳುಗಳಿಗೆ ತಾತ್ಕಾಲಿಕ ಚಿಕಿತ್ಸೆ ನೀಡಲಾಗಿದೆ.ಬಿರುಗಾಳಿಯ ಪರಿಣಾಮವಾಗಿ ಗ್ರಾಮದ ದಶಕಗಳ ಹಳೆಯ ಗಿಡಮರಗಳು ಮತ್ತು ಸುಮಾರು 10ಕ್ಕೂ ಹೆಚ್ಚು ವಿದ್ಯುತ್ ಕಂಬಗಳು ಧರೆಗುರುಳಿದ್ದು,ವಿದ್ಯುತ್ ಸರಬರಾಜು ಸ್ಥಗಿತಗೊಂಡು ಅಸ್ತವ್ಯಸ್ತಗೊಂಡಿದ್ದು ಅಲ್ಲದೆ ಹಲವು ದ್ವಿಚಕ್ರ ವಾಹನಗಳು ಹಾಗೂ ಎರಡು ಕಾರುಗಳು ಸಂಪೂರ್ಣವಾಗಿ ಹಾನಿಗೊಳಗಾಗಿವೆ ಎಂದು ಗ್ರಾಮಸ್ಥ ಜಗನ್ನಾಥರೆಡ್ಡಿ ಚಟ್ನಳ್ಳಿ ತಿಳಿಸಿದ್ದಾರೆ.ಹಾನಿಗೊಳಗಾದ ಪ್ರದೇಶಕ್ಕೆ ಶನಿವಾರ ಸಾಯಂಕಾಲವೇ ಡಿಸಿಸಿ ಬ್ಯಾಂಕ್ ನಿರ್ದೇಶಕ ಗೌತಮ್ ವೈಜನಾಥ ಪಾಟೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿ,ಗಾಯಗೊಂಡ ಯಂಕಪ್ಪ ಹಡಪದ ಅವರಿಗೆ ಸ್ಥಳದಲ್ಲೇ ವ್ಯಯಕ್ತಿಕ ಧನ ಸಹಾಯ ಮಾಡಿ ಬಳಿಕ ತಹಶೀಲ್ದಾರ್ ಅವರಿಗೆ ದೂರವಾಣಿ ಮೂಲಕ ಸಂಪರ್ಕಿಸಿ ಹಾನಿಗೊಳಗಾದ ಮನೆಗಳಿಗೆ ಶೀಘ್ರ ಪರಿಹಾರ ಒದಗಿಸುವಂತೆ ಹೇಳಿದರು.



ಉದಯವಾಹಿನಿ ಚಿತ್ರ

**ರಸ್ತೆಗೆ ಉರುಳಿಬಿದ್ದ ಮರಗಳು:–** ಬಿರುಗಾಳಿಯಿಂದ ಚಿಂಚೋಳಿ ಮನ್ನಾಏಖ್ಖೇಳ್ಳಿ ರಾಷ್ಟ್ರೀಯ ಹೆದ್ದಾರಿ ರಸ್ತೆಗೆ ಹಳೆಯ ಆಲದ ಮತ್ತು ಬೇವಿನಮರ,ಬೋಬಲಿ ಗಿಡಮರಗಳು ಉರುಳಿ ಬಿದ್ದ ಕಾರಣ ಸಂಚಾರ ಸಂಪೂರ್ಣ ಸ್ಥಗಿತಗೊಂಡಿತ್ತು,ಅರಣ್ಯ ಇಲಾಖೆ ಮತ್ತು ಗ್ರಾಮಸ್ಥರ ಸಹಕಾರದಿಂದ ಮರಗಳನ್ನು ತೆರವುಗೊಳಿಸಿ ರಸ್ತೆ ಸಂಚಾರವನ್ನು ಪುನಃ ಆರಂಭಿಸಲಾಯಿತು.

ಈ ಸಂದರ್ಭದಲ್ಲಿ ವಿಠ್ಠಲ್ ರೆಡ್ಡಿ ಸೇರಿಕಾರ,ಸಂತೋಷರೆಡ್ಡಿ ಸೇರಿಕಾರ,ಅನೀಲ ದೊಡ್ಡಮನಿ,ಗೋಪಾಲರೆಡ್ಡಿ ಕೊಳ್ಳೂರು,ಸಂತೋಷರೆಡ್ಡಿ ನಾಗಾಇದ್ಲಾಯಿ ಸೇರಿದಂತೆ ಗ್ರಾಮದ ಅನೇಕ ಹಿರಿಯ ಮುಖಂಡರು ಇದ್ದರು.

# ಗಾಂಧಿ ವೃತ್ತದಲ್ಲಿ ಸಿಗ್ನಲ್ ಕೆಳಗೇ ಆಟೋ ಹಾಗೂ ಸಿಟಿ ಬಸ್ ನಿಲುಗಡೆಗೆ ಅವಕಾಶ

• ಉದಯವಾಹಿನಿ ವಿಜಯಪುರ


ಉದಯವಾಹಿನಿ ಚಿತ್ರ

ನಗರದ ಪ್ರಮುಖ ಸಂಚಾರ ಕೇಂದ್ರವಾಗಿರುವ ಗಾಂಧಿ ವೃತ್ತದಲ್ಲಿ ಸಿಗ್ನಲ್ ವ್ಯವಸ್ಥೆ ಇದ್ದರೂ, ಅದರ ಕೆಳಭಾಗದಲ್ಲೇ ಆಟೋ ರಿಕ್ಷಾ ಹಾಗೂ ಸಿಟಿ ಬಸ್‌ಗಳ ನಿಲುಗಡೆ ವ್ಯವಸ್ಥೆ ಮಾಡಿರುವುದರಿಂದ ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತವಾಗುತ್ತಿದೆ. ಇದರಿಂದ ಪ್ರತಿನಿತ್ಯ ಸಾವಿರಾರು ವಾಹನ ಸವಾರರು ಹಾಗೂ ಪಾದಚಾರಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.

ಗಾಂಧಿ ವೃತ್ತವು ನಗರದ ಹೃದಯಭಾಗವಾಗಿದ್ದು, ಇಲ್ಲಿಂದ ವಿವಿಧ ಪ್ರದೇಶಗಳಿಗೆ ವಾಹನಗಳು ಸಂಚರಿಸುತ್ತವೆ. ಆದರೆ ಸಿಗ್ನಲ್ ಸಮೀಪವೇ ಆಟೋಗಳ ನಿಲುಗಡೆ ಮತ್ತು ಪ್ರಯಾಣಿಕರ ಏರಿಳಿತ ನಡೆಯುತ್ತಿರುವುದರಿಂದ ವಾಹನಗಳ ಸಾಲು ಹೆಚ್ಚುತ್ತಿದ್ದು, ಸಂಚಾರ ದಟ್ಟಣೆ ಸಾಮಾನ್ಯ ದೃಶ್ಯವಾಗಿದೆ.

ವಿಶೇಷವಾಗಿ ಗಾಂಧಿ ವೃತ್ತದ ರಸ್ತೆಗಳಲ್ಲಿ ಬಸ್‌ಗಳನ್ನು ನಿಲ್ಲಿಸಿ ಪ್ರಯಾಣಿಕರನ್ನು ಇಳಿಸುವ ಸಂದರ್ಭ ವಾಹನಗಳ ಸಂಚಾರಕ್ಕೆ ಅಡ್ಡಿಯಾಗುತ್ತಿದೆ. ಸಿಗ್ನಲ್ ಹಸಿರು ಬಣ್ಣ ತೋರಿಸಿದರೂ ವಾಹನಗಳು ಮುಂದೆ ಸಾಗಲು ಸಾಧ್ಯವಾಗದ ಪರಿಸ್ಥಿತಿ ನಿರ್ಮಾಣವಾಗುತ್ತಿದೆ.

ಶಾಲಾ–ಕಾಲೇಜು ವಿದ್ಯಾರ್ಥಿಗಳು, ಉದ್ಯೋಗಿಗಳು ಹಾಗೂ ವ್ಯಾಪಾರಸ್ಥರು ಪ್ರತಿನಿತ್ಯ ಸಮಯ ವ್ಯರ್ಥವಾಗುತ್ತಿರುವುದಾಗಿ ಅಸಮಾಧಾನ ವ್ಯಕ್ತ ಪಡಿಸಿದ್ದಾರೆ.ತುರ್ತು ಸೇವೆಗಳ ವಾಹನಗಳಿಗೂ ಸಂಚಾರ ದಟ್ಟಣೆಯಿಂದ ಸಮಸ್ಯೆ ಎದುರಾಗುತ್ತಿದೆ ಎಂಬುದು ಸಾರ್ವಜನಿಕರ ಆರೋಪವಾಗಿದೆ.

ಸಂಚಾರ ತಜ್ಞರ ಪ್ರಕಾರ, ಸಿಗ್ನಲ್ ಸಮೀಪ ಯಾವುದೇ ರೀತಿಯ ನಿಲುಗಡೆ ವ್ಯವಸ್ಥೆ ಇರಬಾರದು. ಆಟೋ ಮತ್ತು ಸಿಟಿ ಬಸ್ ನಿಲ್ದಾಣಗಳನ್ನು ಸೂಕ್ತ ಅಂತರದಲ್ಲಿ ಸ್ಥಳಾಂತರಿಸಿದರೆ ಸಂಚಾರ ದಟ್ಟಣೆ ಗಣನೀಯವಾಗಿ ಕಡಿಮೆಯಾಗಲಿದೆ.

# ಯೋಗ ಒಂದು ಜೀವನ ಪದ್ಧತಿ: ಪ್ರೊ. ಎ.ಎಸ್. ಕಂದಗಲ

• ಉದಯವಾಹಿನಿ ಜಮಖಂಡಿ, :

ಯೋಗವು ದೇಹ, ಮನಸ್ಸು ಮತ್ತು ಆತ್ಮವನ್ನು ಸಮನ್ವಯಗೊಳಿಸಿ ಆರೋಗ್ಯ ಕಾಪಾಡಿಕೊಳ್ಳುವ ಹಾಗೂ ಆಂತರಿಕ ಶಾಂತಿಯನ್ನು ಅನುಭವಿಸುವ ಒಂದು ಜೀವನ ಪದ್ಧತಿಯಾಗಿದೆ ಎಂದು ಯೋಗಗುರು ಹಾಗೂ ನಿವೃತ್ತ ಪ್ರಾಧ್ಯಾಪಕ ಎ.ಎಸ್. ಕಂದಗಲ ಹೇಳಿದರು.ಬಸವಜ್ಯೋತಿ ಶಿಕ್ಷಣ ಸಮೂಹ ಸಂಸ್ಥೆಗಳ ಆಶ್ರಯದಲ್ಲಿ ಶನಿವಾರ ನಡೆದ 12ನೇ ವಿಶ್ವಯೋಗ ದಿನಾಚರಣೆಯಲ್ಲಿ ಯೋಗಾಸನಗಳ ಪ್ರಾತ್ಯಕ್ಷಿಕೆ ನೀಡಿ ಅವರು ಮಾತನಾಡಿದರು.

ಸೂರ್ಯ ನಮಸ್ಕಾರ ಮಾಡುವುದರಿಂದ ರಕ್ತಸಂಚಲನ ಸುಧಾರಿಸುತ್ತದೆ, ದೇಹದ ತೂಕ ನಿಯಂತ್ರಣಕ್ಕೆ ಸಹಕಾರಿಯಾಗುತ್ತದೆ ಹಾಗೂ ಜೀರ್ಣಕ್ರಿಯೆಯನ್ನು ಸುಲಭಗೊಳಿಸುತ್ತದೆ ಎಂದು ತಿಳಿಸಿದರು. ಪ್ರಾಚಾರ್ಯ ಡಾ. ಟಿ.ಪಿ. ಗಿರಡ್ಡಿ ಮಾತನಾಡಿ, ಮನಸ್ಸಿನ ಏಕಾಗ್ರತೆ ಸಾಧಿಸಲು ಹಾಗೂ ಸ್ಮರಣಶಕ್ತಿಯನ್ನು ವೃದ್ಧಿಸಿಕೊಳ್ಳಲು ವಿದ್ಯಾರ್ಥಿಗಳು ಪ್ರತಿದಿನ ಯೋಗಾಭ್ಯಾಸ ಮಾಡಬೇಕು ಎಂದು ಸಲಹೆ ನೀಡಿದರು. ಬಸವಜ್ಯೋತಿ ಶಿಕ್ಷಣ ಸಮೂಹ ಸಂಸ್ಥೆಗಳ ಆಡಳಿತಾಧಿಕಾರಿ ಬಸವರಾಜ ಕಡ್ಡಿ ಅಧ್ಯಕ್ಷತೆ ವಹಿಸಿದ್ದರು. ಸಂಭ್ರಮ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. 5ನೇ ತರಗತಿ ವಿದ್ಯಾರ್ಥಿಗಳು ಸಾಮೂಹಿಕ ಯೋಗ ಪ್ರದರ್ಶನ ನೀಡಿದರು. ಶಿಕ್ಷಕ ಹಾಗೂ ಶಿಕ್ಷಕೇತರ ಸಿಬ್ಬಂದಿ ಕಾರ್ಯಕ್ರಮದ ಯಶಸ್ಸಿಗೆ ಶ್ರಮಿಸಿದರು.

# ಶ್ರೀಕೃಷ್ಣದೇವರಾಯ ವಿ.ವಿ ಘಟಿಕೋತ್ಸವ ಪ್ರಮಾಣಪತ್ರ ಹಗರಣ: ಕೊನೆಗೂ ಎಫ್ಐಆರ್

## 2025ರ ಫೆಬ್ರುವರಿಯಲ್ಲಿ ವಿದ್ಯಾರ್ಥಿಯೊಬ್ಬರು 8,500 ಪಾವತಿಸಿದ್ದರೂ ಪ್ರಮಾಣಪತ್ರ ದೊರೆಯದ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯಕ್ಕೆ ದೂರು

• ಉದಯವಾಹಿನಿ ಬಳ್ಳಾರಿ:

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದಲ್ಲಿ (ವಿಎಸ್‌ಕೆಯು) ನಡೆದಿದ್ದ ಕೋಟ್ಯಂತರ ರೂಪಾಯಿ ಮೊತ್ತದ ಘಟಿಕೋತ್ಸವ ಪ್ರಮಾಣಪತ್ರ ಹಗರಣಕ್ಕೆ ಸಂಬಂಧಿಸಿದಂತೆ ನಿವೃತ್ತ ನ್ಯಾಯಾಧೀಶರ ತನಿಖಾ ವರದಿ ಸಲ್ಲಿಕೆಯಾಗಿ ಹಲವು ತಿಂಗಳುಗಳೇ ಕಳೆದರೂ ಕ್ರಮ ಕೈಗೊಳ್ಳಲು ಮೀನಾಮೇಷ ಎಣಿಸುತ್ತಿದ್ದ ವಿಶ್ವವಿದ್ಯಾಲಯವು, ಕೊನೆಗೂ ಜೂನ್ 18ರಂದು ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಅಧಿಕೃತವಾಗಿ ಎಫ್ಐಆರ್ ದಾಖಲಿಸಿದೆ. ವಿಶ್ವವಿದ್ಯಾಲಯದ ಕುಲಸಚಿವ (ಮೌಲ್ಯಮಾಪನ) ಪ್ರೊ.ಎನ್. ಎಂ. ಸಾಲಿ ನೀಡಿದ ಲಿಖಿತ ದೂರಿನ ಮೇರೆಗೆ ಎಫ್ಐಆರ್ ಆಗಿದೆ. ಪರೀಕ್ಷಾಂಗ ವಿಭಾಗದಲ್ಲಿ ಡಾಟಾ ಎಂಟ್ರಿ ಅಪರೇಟರ್‌ಗಳಾಗಿ ಕೆಲಸ ಮಾಡುತ್ತಿದ್ದ ಮಹಂತೇಶ್ ವೈ. (40) ಹಾಗೂ ಹನುಮೇಶ್ ಸೂಡಿ (35) ಅವರನ್ನು ಪ್ರಮುಖ ಆರೋಪಿಗಳನ್ನಾಗಿ ಹೆಸರಿಸಲಾಗಿದೆ. ಆದರೆ, ತನಿಖಾ ಸಮಿತಿ ಹೆಸರಿಸಿದ್ದ ಇತರ ಆರೋಪಿಗಳನ್ನು ಎಫ್ಐಆರ್‌ನಿಂದ ಹೊರಗಿಡಲಾಗಿದೆ.

**ಎಫ್ಐಆರ್‌ನಲ್ಲಿ ಏನಿದೆ?:** ಮಹಾಂತೇಶ್ 2012ರಿಂದ ಹಾಗೂ ಹನುಮೇಶ್ 2022ರಿಂದ ಪರೀಕ್ಷಾಂಗ ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದರು.

ಘಟಿಕೋತ್ಸವ ಪ್ರಮಾಣಪತ್ರಬೇಕೆಂದು ಬರುವ ವಿದ್ಯಾರ್ಥಿಗಳು ಹಾಗೂ ಹಳೆಯ ವಿದ್ಯಾರ್ಥಿಗಳಿಂದ ನೇರವಾಗಿ ಹಣ ಪಡೆದು, ಅಧಿಕೃತ ಶುಲ್ಕವನ್ನು ವಿಶ್ವವಿದ್ಯಾಲಯದ ಖಾತೆಗೆ ಜಮಾ ಮಾಡದೆ ತಮ್ಮ ಖಾತೆಗಳಿಗೆ ವರ್ಗಾಯಿಸಿಕೊಂಡಿದ್ದಾರೆ ಎಂದು ಆರೋಪಿಸಲಾಗಿದೆ. ಕೆಲವರಿಗೆ ನಕಲಿ ಘಟಿಕೋತ್ಸವ ಪ್ರಮಾಣಪತ್ರಗಳನ್ನು ಸೃಷ್ಟಿಸಿ ನೀಡಿರುವುದೂ ತನಿಖೆಯಲ್ಲಿ ಬೆಳಕಿಗೆ ಬಂದಿದೆ. 2025ರ ಫೆಬ್ರುವರಿಯಲ್ಲಿ ವಿದ್ಯಾರ್ಥಿಯೊಬ್ಬರು 8,500 ಪಾವತಿಸಿದ್ದರೂ ಪ್ರಮಾಣಪತ್ರ ದೊರೆಯದ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯಕ್ಕೆ ದೂರು ನೀಡಿದ್ದರು.


ಉದಯವಾಹಿನಿ ಚಿತ್ರ



> ಸಾಹೇಬ ಅಲಿ ಎಚ್. ನಿರಗುಡಿ, ರಮೇಶ ಓಲೇಕಾರ ಅವರು ತಮ್ಮದೇನು ತಪ್ಪಿಲ್ಲ ಎಂದು ವಿ.ವಿಗೆ ಪತ್ರ ನೀಡಿದ್ದಾರೆ. ಅದನ್ನು ಸಿಂಡಿಕೇಟ್‌ನಲ್ಲಿ ಮಂಡಿಸಲಾಗುವುದು. ಆ ಬಳಿಕ ಏನು ಕ್ರಮ ಕೈಗೊಳ್ಳಬೇಕು ಎಂಬುದನ್ನು ನಿರ್ಧರಿಸಲಾಗುತ್ತದೆ.
> **–ಮುನಿರಾಜು, ಕುಲಪತಿ, ವಿಎಸ್‌ಕೆಯು**

### ಎಫ್ಐಆರ್ ದಾಖಲಿಸಿ ಅಮಾನತು ಮಾಡಬೇಕು.

ಕ್ರಮವಾಗಿ ಘಟಿಕೋತ್ಸವ ಪ್ರಮಾಣ ಪತ್ರ ನೀಡಿದ, ಸ್ವೀಕರಿಸಿದ ಎಲ್ಲರ ವಿರುದ್ಧ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಿಸಬೇಕು, ಎಂಬಿಎ ವಿಬಾಗದ ಡಿಇಒ ಬಸವರಾಜು ಪ್ರಶಾಂತ, ಅತಿಥಿ ಉಪನ್ಯಾಸಕರಾದ ಪಿನ್ನಿಂಟಿ ಈಶ್ವರರಾವ್, ಕುಮಾರಸ್ವಾಮಿ ಡಿ.ಎಚ್ ಎಂಬುವವರನ್ನು ಅಮಾನತು ಮಾಡಬೇಕು. ಪರೀಕ್ಷಾಂಗ ವಿಭಾಗದ ಗೌಪ್ಯತೆ ರಕ್ಷಿಸಬೇಕು ಎಂದು ಶಿಫಾರಸು ಮಾಡಲಾಗಿತ್ತು. ಸದ್ಯ ಇಬ್ಬರು ನೌಕರರ ಮೇಲೆ ಎಫ್ಐಆರ್ ದಾಖಲಾಗಿದೆ.

ಇದೇ ರೀತಿ ಇನ್ನೂ ಹಲವು ವಿದ್ಯಾರ್ಥಿಗಳು ಹಾಗೂ ಸಂಶೋಧನಾ ವಿದ್ಯಾರ್ಥಿಗಳಿಂದಲೂ ದೂರುಗಳು ಬಂದ ನಂತರ ದಾಖಲೆಗಳ ಪರಿಶೀಲನೆ ನಡೆಸಲಾಗಿದೆ. ಆಗ ಹಲವಾರು ಪ್ರಮಾಣಪತ್ರಗಳಲ್ಲಿ ಕುಲಪತಿ, ಕುಲಸಚಿವ ಮತ್ತು ಇತರ ಅಧಿಕಾರಿಗಳ ಸಹಿಗಳನ್ನು ನಕಲಿ ಮಾಡಿರುವುದು ಪತ್ತೆಯಾಗಿದೆ ಎಂದು ವಿವರಿಸಲಾಗಿದೆ.

ಪ್ರಾಥಮಿಕ ತನಿಖೆಯಲ್ಲಿ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕಿದ್ದ ಕನಿಷ್ಠ 4.21 ಲಕ್ಷ ಶುಲ್ಕವನ್ನು ಆರೋಪಿಗಳು ದುರುಪಯೋಗಪಡಿಸಿಕೊಂಡಿರುವುದು ಕಂಡುಬಂದಿದೆ.

ಅಲ್ಲದೆ ಮಹಾಂತೇಶ್ ಅವರ ಬ್ಯಾಂಕ್ ಖಾತೆಯಲ್ಲಿ ಘಟಿಕೋತ್ಸವ ಪ್ರಮಾಣಪತ್ರಗಳ ಹೆಸರಿನಲ್ಲಿ ಸುಮಾರು 18 ಲಕ್ಷಕ್ಕೂ ಹೆಚ್ಚು ಹಣ ಜಮೆಯಾಗಿರುವುದು ಹಾಗೂ 2020ರಿಂದ 2022ರ ಅವಧಿಯಲ್ಲಿ ಒಟ್ಟು 4,476 ಘಟಿಕೋತ್ಸವ ಪ್ರಮಾಣಪತ್ರಗಳು ವಿತರಿಸಲ್ಪಟ್ಟಿರುವುದು ನಿವೃತ್ತ ಜಿಲ್ಲಾ ನ್ಯಾಯಾಧೀಶರ ತನಿಖೆಯಲ್ಲೂ ಬಯಲಾಗಿತ್ತು ಎಂದು ದೂರಿನಲ್ಲಿ ಹೇಳಲಾಗಿದೆ. ವಿ.ವಿಯಲ್ಲಿ ವರ್ಷದ ಹಿಂದೆ ಬಯಲಾಗಿದ್ದ ಈ ಘಟಿಕೋತ್ಸವ ಪ್ರಮಾಣಪತ್ರ ಹಗರಣದ ತನಿಖೆಗೆ ನೇಮಕಗೊಂಡಿದ್ದ ನಿವೃತ್ತ ನ್ಯಾಯಾಧೀಶ ಶಿಂಧೆ ಸಮಿತಿಯು ಹಗರಣದಲ್ಲಿನ ಹಲವು ಆಯಾಮಗಳನ್ನು ಬಯಲಿಗೆಳೆದಿತ್ತು.

ಹಿಂದಿನ ಕುಲಪತಿ ಸಾಹೇಬ ಅಲಿ ಎಚ್. ನಿರಗುಡಿ ಅವರ ವಿರುದ್ಧ ದುರ್ನಡತೆ ಆಧಾರದಲ್ಲಿ ಶಿಸ್ತುಕ್ರಮ ಕೈಗೊಳ್ಳಬೇಕು. ಕುಲಸಚಿವ ರಮೇಶ ಓಲೇಕಾರ ಅವರ ಲೋಪಗಳನ್ನು ಪತ್ತೆ ಹಚ್ಚಿತ್ತು. ಅವರನ್ನು ಅಮಾನತಾಗಬೇಕು, ಶಿಸ್ತುಕ್ರಮ ಜರುಗಿಸಬೇಕು ಎಂದು ಹೇಳಿತ್ತು.

### ಅಧಿಕಾರಿಗಳ ಸಹಿ ದುರುಪಯೋಗ

ಆರೋಪಿಗಳು ವಿಶ್ವವಿದ್ಯಾಲಯದ ಕಂಪ್ಯೂಟರ್ ವ್ಯವಸ್ಥೆ, ದಾಖಲೆಗಳು ಹಾಗೂ ಅಧಿಕಾರಿಗಳ ಸಹಿಗಳನ್ನು ದುರುಪಯೋಗಪಡಿಸಿಕೊಂಡು ನಕಲಿ ಪ್ರಮಾಣಪತ್ರಗಳನ್ನು ಸೃಷ್ಟಿಸಿ ಹಣ ವಸೂಲಿ ಮಾಡಿದ್ದಾರೆ ಎಂದು ಕುಲಸಚಿವರು ದೂರಿನಲ್ಲಿ ಆರೋಪಿಸಿದ್ದಾರೆ.